♦ ಮಂಡ್ಯ ♦ ಮೈಸೂರು ♦ ಚಾಮರಾಜನಗರ ♦ ಹಾಸನ ♦ ರಾಮನಗರ ♦ ತುಮಕೂರು ♦ ಬೆಂಗಳೂರು ಗ್ರಾಮಾಂತರ ♦ ಬೆಂಗಳೂರು ನಗರ E-mail:kayakayogi @gmail.com


ಕಾಯಕ ಯೋಗಿ

ಸಂಪಾದಕರು:ಅರುಣಜ್ಯೋತಿ ಬಿ.ಕೆ. KAYAKA YOGI - Regional Daily ಪ್ರಾದೇಶಿಕ ದಿನಪತ್ರಿಕೆ

RNI No.KARKAN/2018/77805 | POST NO.KA/SK/MND/999/2022-2024 | ಮಂಡ್ಯ Mandya | ಸಂಪುಟ Volume 07 | ಸಂಚಿಕೆ Issue 33 | ಶನಿವಾರ Saturday | 11-05-2024 | ಪುಟಗಳು Pages 06 | ಬೆಲೆ Rate 02 | ಸಂಪರ್ಕ 9980605484

ವಿಶ್ವ ಗುರುವಿಗೆ ಸಿಎಂ ಶರಣು ಸಮರ್ಪಣೆ

ನಾಡಿನಾದ್ಯಂತ ಬಸವಣ್ಣನವರ ಜಯಂತಿ ಆಚರಣೆ



ಮೈಸೂರು: ಬಸವ ಜಯಂತಿ ಪ್ರಯುಕ್ತ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಗನ್ ಹೌಸ್ ಬಸವೇಶ್ವರ ವೃತ್ತದಲ್ಲಿನ ಬಸವೇಶ್ವರರ ಪುತ್ಥಳಿಗೆ ಪುಷ್ಪಾರ್ಚನೆ ಮಾಲಾರ್ಪಣೆ ಮಾಡಿದರು.

ಸುತ್ತೂರು ಮಠದ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಸಚಿವ ಹೆಚ್.ಸಿ.ಮಹದೇವಪ್ಪ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಪುಷ್ಪಾ ಅಮರನಾಥ್, ಶಾಸಕ ಹರೀಶ್ ಗೌಡ ಸೇರಿ ಹಲವು ಮುಖಂಡರು ಉಪಸ್ಥಿತರಿದ್ದರು.

ಚುನಾವಣಾ ನೀತಿ ಸಂಹಿತೆ ಇರುವುದರಿಂದ ಸರ್ಕಾರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗುವುದಿಲ್ಲ. ಈ ಕಾರಣಕ್ಕೆ ಬಸವಣ್ಣನವರ ಮೂರ್ತಿಗೆ ಹಾರ ಹಾಕಿ, ಅವರನ್ನು ಸ್ಮರಿಸುತ್ತಾ, ಅವರ ವಿಚಾರಗಳನ್ನು ಸ್ಮರಿಸಿ, ಆ ದಾರಿಯಲ್ಲಿ ನಡೆಯುವ ಸಂಕಲ್ಪ ಮಾಡಿದ್ದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ಚುನಾವಣಾ ನೀತಿ ಸಂಹಿತೆ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ಜಿಲ್ಲಾ ಡಳಿತ ಸರಳವಾಗಿ ವಿಶ್ವಗುರು ಬಸವಣ್ಣ ಹಾಗೂ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಜಯಂತ್ಯೋತ್ಸವವನ್ನು ಆಚರಣೆ ಮಾಡಿದೆ. ಮೈಸೂರು, ಮಂಡ್ಯ, ಹಾಸನ, ರಾಮನಗರ, ಬೆಂಗಳೂರು, ಚಾಮರಾಜನಗರ, ತುಮಕೂರು ಜಿಲ್ಲೆಯ ಹಲವೆಡೆ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಬಸವಣ್ಣನವರ ಜಯಂತ್ಯೋತ್ಸವವನ್ನು ಆಚರಿಸಿ ಸಿಹಿ ವಿತರಿಸಿ ಸಂಭ್ರಮಿಸಲಾಯಿತು.

ಅಂಕಿತಾಗೆ ಸಿಎಂ ಅಭಿನಂದನೆ: ರಲ್ಲಿ ನಾನು ಹಣಕಾಸು ಸಚಿವನಾಗಿದ್ದಾಗ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ಅಭ್ಯಾಸ ಮಾಡಿ ರಾಜ್ಯಕ್ಕೆ ಮೊದಲ ರ‍್ಯಾಂಕ್ ಪಡೆದ ವಿದ್ಯಾರ್ಥಿನಿ ಅಂಕಿತಾ ಬಸಪ್ಪ ಕೊನ್ನೂರ ಅವರನ್ನು ಅಭಿನಂದಿಸಿದ ಮುಖ್ಯಮಂತ್ರಿಗಳು ಈ ವಸತಿ ಶಾಲೆಗಳ ಇನ್ನಷ್ಟು ಮಕ್ಕಳು ರ್ಯಾಂಕ್ ಪಡೆಯಬೇಕು. ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣರಾಗಬೇಕೆಂದು ಆಶಿಸಿದರು.

ಅವರು ಇಂದು ಮೈಸೂರಿನಲ್ಲಿ ಬಸವ ಜಯಂತಿ ಅಂಗವಾಗಿ ಬಸವೇಶ್ವರರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಅಂಕಿತಾಳ ಸಾಧನೆಗೆ ಹರ್ಷ ವ್ಯಕ್ತಪಡಿಸಿದ ಮುಖ್ಯಮಂತ್ರಿಗಳು ಮೊರಾರ್ಜಿ ದೇಸಾಯಿ ವಸತಿ ಶಾಲೆ ಸ್ಥಾಪನೆಯ ಉದ್ದೇಶವೇ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಕೂಡ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬುದಾಗಿದೆ. 1994 ರಲ್ಲಿ ನಾನು ಹಣಕಾಸು ಸಚಿವನಾಗಿದ್ದಾಗ ಹೆಂಡದಂಗಡಿ, ಸಾರಾಯಿ ಅಂಗಡಿ ಬೇಡ, ವಸತಿ ಶಾಲೆ ಬೇಕು ಎಂಬುದು ದಲಿತ ಹೋರಾಟದ, ದಲಿತ ಸಂಘರ್ಷ ಸಮಿತಿ ಯವರ ಘೋಷಣೆಯಾಗಿತ್ತು. ಅವರೊಂದಿಗೆ ನಿಕಟ ಸಂಪರ್ಕ ಹೊಂದಿದ್ದ ಕಾರಣ ಮತ್ತು ನಾನು ಕೂಡ ಗ್ರಾಮೀಣ ಪ್ರದೇಶದಿಂದ ಬಂದವನಾದ್ದರಿಂದ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶದಿಂದ ಮೊರಾರ್ಜಿ ವಸತಿ ಶಾಲೆಗಳನ್ನು ಸ್ಥಾಪಿಸಲಾಯಿತು. ಇಂದು ಹೋಬಳಿಗೊಂದರಂತೆ 800 ಕ್ಕೂ ಹೆಚ್ಚು ಮೊರಾರ್ಜಿ ದೇಸಾಯಿ ವಸತಿ ಶಾಲೆ ಸ್ಥಾಪಿಸಲಾಗಿದೆ ಎಂದು ಅವರು ತಿಳಿಸಿದರು.

ಎಸ್. ಎಸ್. ಎಲ್. ಸಿ. ಪರೀಕ್ಷೆಯಲ್ಲಿ ಮೈಸೂರು ಜಿಲ್ಲೆ ಏಳನೇ ಸ್ಥಾನ ಪಡೆದಿದೆ. ಈ ಬಾರಿ ಐದರೊಳಗೆ ಬರಬೇಕು ಎಂದು ಸೂಚಿಸಿದ್ದೆ. ಏಳನೇ ಸ್ಥಾನ ಪಡೆದಿದೆ. ಮುಂದಿನ ಬಾರಿ ಈ ಗುರಿ ಸಾಧಿಸುವಂತೆ ತಿಳಿಸಲಾಗುವುದು.

ಜೆಡಿಎಸ್‌ನಿಂದ ಸ್ಪರ್ಧೆ: ಕೆ.ಟಿ.ಶ್ರೀಕಂಠೇಗೌಡ



ಮಂಡ್ಯ: ದಕ್ಷಿಣ ಶಿಕ್ಷಕರ ಕ್ಷೇತ್ರದಿಂದ ವಿಧಾನಪರಿಷತ್ತಿಗೆ ಸ್ಪರ್ಧೆ ಬಯಸಿ ಜೆಡಿಎಸ್ ಟಿಕೆಟ್ ನಿರಿಕ್ಷಿಸುತ್ತಿದ್ದೇನೆ ಎಂದು ಮಾಜಿ ಶಾಸಕ ಕೆ.ಟಿ.ಶ್ರೀಕಂಠೇಗೌಡ ವಿಶ್ವಾಸ ವ್ಯಕ್ತಪಡಿಸಿದರು.

ನಗರದಲ್ಲಿರುವ ಕರ್ನಾಟಕ ಸಂಘದ ಕೆ.ವಿ.ಎಸ್‌ಭವನದಲ್ಲಿ ವಿಧಾನಪರಿಷತ್‌ನ ದಕ್ಷಿಣ ಶಿಕ್ಷಕರ ಕ್ಷೇತ್ರ ಮಂಡ್ಯ ವ್ಯಾಪ್ತಿಯ ಶಿಕ್ಷಕರ ಚುನಾವಣಾ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು. ಜೂ.03ರಂದು ವಿಧಾನಪರಿಷತ್ತಿನ 6 ಸದಸ್ಯ ಸ್ಥಾನಗಳಿಗೆ ಮತದಾನ ಘೋಷಣೆ ಯಾಗಿದೆ. ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ ಶಿಕ್ಷಕರೇ ಸ್ಪರ್ಧೆ ಮಾಡಿ, ಗೆಲ್ಲಿಸಿಕೊಂಡು ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸು ನಿಟ್ಟಿನಲ್ಲಿ ಸಂಕಲ್ಪ ಶಿಕ್ಷಕರದ್ದಾಗಿದೆ. ಈ ನಿಟ್ಟಿನಲ್ಲಿ ಪ್ರಾಜ್ಞಾರ್ಯರೂ ಶಿಕ್ಷಕರು ಆದ ನಾವು ಈ ಭಾರಿ ಶಿಕ್ಷಕರ ಕ್ಷೇತ್ರಕ್ಕೆ ಸ್ಪರ್ಧೆ ಮಾಡಲು ಒತ್ತಾಯವಿದ್ದ ಮೇರೆಗೆ ಸ್ಪರ್ಧೆ ಮಾಡು ತ್ತಿದ್ದೇನೆ ಎಂದು ನುಡಿದರು.

ರಾಜ್ಯದಲ್ಲಿ ಜೆಡಿಎಸ್ ಮತ್ತು ಬಿಜೆಪಿ ಮೈತ್ರಿ ಇರುವುದಿಂದ ವಿಧಾನ ಪರಿಷತ್ತಿನ ಚುನಾವಣೆಗೂ ಮೈತ್ರಿ ಬಲ ಹೆಚ್ಚಲಿದೆ. ಈ ಹಿನ್ನೆಲೆಯಲ್ಲಿ ದಕ್ಷಿಣ ಶಿಕ್ಷಕರ ಕ್ಷೇತ್ರವು ಜೆಡಿಎಸ್‌ಗೆ ಲಭ್ಯವಾಗಬಹುದು, ಲಭ್ಯವಾದರೆ ಜೆಡಿಎಸ್ ಟಿಕೆಟ್ ನಮಗೆ ಸಿಗುವ ಸಾಧ್ಯತೆ ಹೆಚ್ಚಿದೆ ಎಂಬ ವಿಶ್ವಾಸವಿದೆ ಎಂದು ತಿಳಿಸಿದರು.

ಈಗಾಗಲೇ ನಾನು ಕಳೆದ 13 ತಿಂಗ ಳಿಂದಲೇ 4 ಜಿಲ್ಲೆಗಳಲ್ಲಿ ಸತತ ಮೂರು ಮೂರು ಸುತ್ತು ಪ್ರತಿ ತಾಲೂಕಿನ ಶಿಕ್ಷಕ ಮತದಾರರನ್ನು ಸಂಪರ್ಕ ಮಾಡಿದ್ದೇನೆ. ಎಲ್ಲರೂ ಭರವಸೆ ನೀಡಿದ್ದಾರೆ. ನಾವು ಬದಲಾವಣೆಯನ್ನು ಬಯಸುತ್ತೇವೆ. ಈ ಬಾರಿ ನಿಮಗೆ ಅವಕಾಶ ಮಾಡಿಕೊಡು ತ್ತೇವೆ ನಮ್ಮ ಪ್ರತಿನಿಧಿ ಒಬ್ಬ ಶಿಕ್ಷಕನೇ ಇರ ಬೇಕು ಎನ್ನುವುದು ನಮ್ಮ ಬಯಕೆಯಾಗಿದೆ ಎಂದು ಭರವಸೆ ನೀಡಿದ್ದಾರೆ ಎಂದರು.

ಸದಸನದಲ್ಲಿ ನಾನು ಮತನಾಡುವಾಗ ಪದವೀಧರರ ಸಮಸ್ಯೆಗಳಿಗಿಂತ ಶಿಕ್ಷಕರ ಸಮಸ್ಯೆಗಳ ಕುರಿತು ಹೆಚ್ಚು ಚರ್ಚೆ ನಡೆಸಿ, ಸಮಸ್ಯೆಗಳ ಪರಿಹಾರಕ್ಕೆ ಮುಂದಾಗಿದ್ದೇನೆ, ಹಳೇ ಪಿಂಚಣಿ ವ್ಯವಸ್ಥೆ ಜಾರಿಯಾಗಬೇಕಿದೆ, ಜಾರಿ ಮಾಡಿಸುವ ಸವಾಲು ನಮ್ಮ ಮುಂದಿದೆ ಎಂದರು. ಸಭೆಯಲ್ಲಿ ಪಿಇಟಿ ಸಂಸ್ಥೆಯ ರಾಮ ಲಿಂಗಯ್ಯ ವಕೀಲ ತುಳಸೀಧರ್ ಮತ್ತು ಮಾಜಿ ಶಾಸಕ ಕೆ.ಟಿ.ಶ್ರೀಕಂಠೇಗೌಡ ಅವರ ಬೆಂಬಲಿಗರು ಹಿತೈಸಿಗಳು ಇದ್ದರು.

ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ: ಮೇ 14ರಂದು ಮರಿತಿಬ್ಬೇಗೌಡ ನಾಮಪತ್ರ

ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ: ಮಂಡ್ಯದಲ್ಲಿ ಕಾಂಗ್ರೆಸ್ ಮುಖಂಡರ ಸಭೆ



ಮಂಡ್ಯ: ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಗೆ ಮೇ.14 ರಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಮರಿ ತಿಬ್ಬೇಗೌಡ ಅವರು ನಾಮಪತ್ರ ಸಲ್ಲಿಸುತ್ತಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ನಗರದ ಕಲ್ಲಹಳ್ಳಿಯಲ್ಲಿರುವ ಖಾಸಗಿ ಸಭಾಂಗಣದಲ್ಲಿ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆ ಸಂಬಂಧ ಕರೆದಿದ್ದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಮಾತನಾಡಿದರು.

ವಿಧಾನಪರಿಷತ್ತಿನ ಶಾಸಕರಾಗಿರುವ ಮರಿತಿಬ್ಬೇಗೌಡ ಅವರು ಸದನದಲ್ಲಿ ಶಿಕ್ಷಕರ ಸಮಸ್ಯೆಗಳ ಜೊತೆ ಎಲ್ಲಾ ವರ್ಗದ ಜನರ ಸಮಸ್ಯೆಗಳ ಬಗ್ಗೆ ಮಾತನಾಡಿ ಗಮನ ಸೆಳೆದಿದ್ದಾರೆ. ಜೂನ್ 3 ರಂದು ನಡೆಯುವ ಚುನಾವಣೆಗೆ ಸ್ಪರ್ಧೆ ಮಾಡಿದ್ದು, ಮೈಸೂರು ಪ್ರಾದೇಶಿಕ ಕಚೇರಿಯಲ್ಲಿ ಮೇ.14ರಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸುವರು, ಹೆಚ್ಚಿನ ಸಂಖ್ಯೆಯಲ್ಲಿ ಬೆಂಬಲ ನೀಡಿ ಎಂದರು.

ಈ ಚುನಾವಣೆ ಕಾಂಗ್ರೆಸ್ ಪಕ್ಷಕ್ಕೆ ಬಹಳ ಮುಖ್ಯವಾದದ್ದು, ಆದ್ದರಿಂದ ಕಾಂಗ್ರೆಸ್ ಕಾರ್ಯಕರ್ತರು ಹೋಬಳಿ ವಾರು ಶಿಕ್ಷಕರ ಮತದಾರರ ಪಟ್ಟಿಯನ್ನು ತೆಗೆದುಕೊಂಡು ವೈಯಕ್ತಿಕವಾಗಿ ಪ್ರತಿ ಯೊಬ್ಬ ಮತದಾರರನ್ನು ಭೇಟಿ ಮಾಡಿ ಮರಿತಿಬ್ಬೇಗೌಡರ ಗೆಲುವಿಗೆ ಶ್ರಮವಹಿಸಿ ಕೆಲಸ ಮಾಡಿ ಎಂದು ಹೇಳಿದರು.

ಬಳಿಕ ಮಾತನಾಡಿದ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಕಾಂಗ್ರೆಸ್ ಅಭ್ಯರ್ಥಿ ಮರಿತಿಬ್ಬೇಗೌಡ, ಎರಡನೇ ಬಾರಿಗೆ ಕಾಂಗ್ರೆಸ್ ಪಕ್ಷದಿಂದ ಜೂನ್ 3ರಂದು ನಡೆಯುವ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಗೆ ಮೇ 14ರಂದು ನಾಮಪತ್ರ ಸಲ್ಲಿಕೆ ಮಾಡುತ್ತಿದ್ದೇನೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರನ್ನು ಭೇಟಿ ಮಾಡಿ ಆಹ್ವಾನಿಸಲು ಈ ಸಭೆ ಕರೆಯಲಾಗಿದೆ ಎಂದರು.

ದಕ್ಷಿಣ ಶಿಕ್ಷಕರ ಕ್ಷೇತ್ರಕ್ಕೆ 4 ಲೋಕಸಭಾ ಕ್ಷೇತ್ರ, 29 ವಿಧಾನಸಭಾ ಕ್ಷೇತ್ರಗಳು ಈ ವ್ಯಾಪ್ತಿಗೆ ಬರುತ್ತವೆ, ಮಂಡ್ಯ ಜಿಲ್ಲೆ ಜನರ ಅಭಿಮಾನದಿಂದ ನಾಲ್ಕು ಭಾರಿ ವಿಧಾನ ಪರಿಷತ್ತಿಗೆ ನಾನು ಆರಿಸಿ ಬಂದಿದ್ದೇನೆ. ನಾಲ್ಕು ಬಾರಿ ನಾನು ಗೆಲ್ಲಲು ಶಿಕ್ಷಕರು ಕಾರಣಕರ್ತರಾಗಿದ್ದಾರೆ ಎಂದು ಹೇಳಿದರು.


ಕಾಂಗ್ರೆಸ್ ಪಕ್ಷದ ಎಲ್ಲಾ ಮುಖಂಡರು ಹೋಬಳಿವಾರು ಪಟ್ಟಿ ತೆಗೆದುಕೊಂಡು ಶಿಕ್ಷಕ ಮತದಾರರನ್ನು ಅವರ ಮನೆಗಳಲ್ಲಿ ಸಂಪರ್ಕ ಮಾಡಿ ಶಿಕ್ಷಕರ ಮನವೊಲಿಸುವ ಕೆಲಸ ಮಾಡಬೇಕು. ಐದನೇ ಬಾರಿಗೆ ಕಾಂಗ್ರೆಸ್ ಪಕ್ಷದಿಂದ ಶಾಸನ ಸಭೆಗೆ ಹೋಗಲು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಮೇಲೆ ಬಡಜನರ, ಕೂಲಿಕಾರರ ದೃಷ್ಟಿ ಇಟ್ಟು ಕೊಂಡು ಕೆಲಸ ಮಾಡುತ್ತಿದೆ. ಮಂಡ್ಯದಲ್ಲಿ ಕೃಷಿ ವಿಶ್ವವಿದ್ಯಾಲಯ ಬರುತ್ತಿರುವುದರಿಂದ ರೈತರು ಕೂಲಿ ಕಾರ್ಮಿಕರ ಬದುಕು ಹಸನಾಗುತ್ತದೆ. ಜಿಲ್ಲೆಯ ನಾಲೆಗಳ ಅಭಿವೃದ್ಧಿ ಕೆಲಸ ನಡೆಯುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ರವಿಕುಮಾರ್ ಗೌಡ ಗಣಿಗ, ದಿನೇಶ್ ಗೂಳಿಗೌಡ, ಮಾಜಿ ಶಾಸಕರಾದ ಎಚ್.ಬಿ.ರಾಮು, ಕೆ.ಬಿ. ಚಂದ್ರಶೇಖರ್, ಪ್ರಕಾಶ್, ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಚಿದಂಬರ್, ಉಪಾಧ್ಯಕ್ಷ ಎಂ.ಎಲ್.ಸುರೇಶ್, ಪ್ರಚಾರ ಸಮಿತಿ ಅಧ್ಯಕ್ಷ ರಾಧಾಕೃಷ್ಣ, ಸಿ.ಕೆ.ನಾಗರಾಜು, ನಾಗೇಂದ್ರ ಕುಮಾರ್ ಮತ್ತಿತರರು ಭಾಗವಹಿಸಿದ್ದರು.

ಜಗಜ್ಯೋತಿ ಬಸವಣ್ಣ ವಿಶ್ವ ಸಂವಿಧಾನ ಶಿಲ್ಪಿ: ಮಂಜುನಾಥ್ ಬೆಟ್ಟಹಳ್ಳಿ

ಸಿದ್ದಗಂಗಾಶ್ರೀ ಉದ್ಯಾನವನದಲ್ಲಿ ಬಸವ ಜಯಂತಿ



ಮಂಡ್ಯ : ಹನ್ನೆರಡನೇ ಶತಮಾನದಲ್ಲೇ ಮೌಢ್ಯಾಚರಣೆಯ ಸಂಕೋಲೆಯನ್ನು ಕಿತ್ತೊಗೆದು ಸರ್ವರನ್ನೂ ಸಮಾನವಾಗಿ ಕಂಡ ಮಹಾಮಾನವತಾವಾದಿ ವಿಶ್ವಗುರು ಬಸವಣ್ಣನವರು ವಿಶ್ವ ಸಂವಿಧಾನ ಶಿಲ್ಪಿ ಎಂದು ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬೆಟ್ಟಹಳ್ಳಿ ತಿಳಿಸಿದರು.

ನಗರದ ಸ್ವರ್ಣಸಂದ್ರ ಬಡಾವಣೆಯ ಪರಮಪೂಜ್ಯ ಡಾ.ಶ್ರೀ ಶಿವಕುಮಾರ ಮಹಾಸ್ವಾಮೀಜಿ ಉದ್ಯಾನವನದಲ್ಲಿ ಕಾಯಕಯೋಗಿ ಫೌಂಡೇಶನ್, ಲಿಂಗಾಯತ ಮಹಾಸಭಾ, ಸಿದ್ದಗಂಗಾಮಠದ ಹಳೆಯ ವಿದ್ಯಾರ್ಥಿಗಳು ಮತ್ತು ಹಿತೈಷಿಗಳ ಸಂಘ ಆಯೋಜಿಸಿದ್ದ ಜಗಜ್ಯೋತಿ ಬಸವೇಶ್ವರರ 891ನೇ ಜಯಂತ್ಯೋತ್ಸವದಲ್ಲಿ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು. ಜಾತಿ, ಧರ್ಮ, ವರ್ಣಾಶ್ರಮಗಳನ್ನು ಕಿತ್ತೊಗೆದು ಸರ್ವರಿಗೂ ಲಿಂಗಧೀಕ್ಷೆಯನ್ನು ನೀಡಿ ಧಾರ್ಮಿಕ, ಸಾಮಾಜಿಕ, ಕಾಯಕ ತತ್ವದ ಮಹತ್ವವನ್ನು ಸಾರಿದ ಬಸವಣ್ಣನವರ ಆದರ್ಶಗಳು ಸೂರ್ಯಚಂದ್ರರಿರು ವವರೆಗೂ ಅಮರವಾಗಿವೆ ಎಂದವರು ಹೇಳಿದರು.

ಕಾಯಕ ಮತ್ತು ದಾಸೋಹ ತತ್ವವನ್ನು ಜನವಾನಾಸದಲ್ಲಿ ಬೇರೂರವಂತೆ ಮಾಡಿದ ಕನ್ನಡನಾಡಿನ ಹೆಮ್ಮೆಯ ದಾರ್ಶನಿಕ ಪುರುಷ ಬಸವಣ್ಣನವರನ್ನು ಮುಖ್ಯ ಮಂತ್ರಿ ಸಿದ್ಧರಾಮಯ್ಯನವರು ಸಾಂಸ್ಕೃತಿಕ ನಾಯಕರೆಂದು ಘೋಷಿಸಿರುವುದು ಅಭಿನಂದನೀಯ ಎಂದರು.

ಕಾಯಕಯೋಗಿ ಫೌಂಡೇಶನ್ ಅಧ್ಯಕ್ಷ ಎಂ.ಶಿವಕುಮಾರ್ ಮಾತನಾಡಿ, ಕರ್ನಾಟಕದ ಪಾಲಿಗೆ ಹನ್ನೆರಡನೇ ಶತಮಾನ ಎಂಬುದು ಬಹಳ ಮಹತ್ವದ್ದು, ಸಮಾಜದಲ್ಲಿ ಬಹುದೊಡ್ಡ ಬದಲಾವಣೆಯ ಹೊಸ ಚಿಂತನೆ ರೂಪುಗೊಂಡ ಕಾಲವದು. ಕನ್ನಡ ಸಾಹಿತ್ಯ ಮತ್ತು ಸಾಂಸ್ಕೃತಿಕ ಇತಿಹಾಸದಲ್ಲಿ ವಿಶಿಷ್ಟವಾದ ಕಾಲಘಟ್ಟವದು. ಸಾಮಾಜಿಕ ಅಸಮಾನತೆ, ಜಾತಿ ವ್ಯವಸ್ಥೆ ಸೇರಿದಂತೆ ಹಲವು ಅನಿಷ್ಟ ಪದ್ಧತಿಗಳು ಆಚರಣೆಯಲ್ಲಿದ್ದ ಈ ಕಾಲದಲ್ಲಿ ವಚನ ಕಾರರು ತಮ್ಮ ಸರಳ ವಚನಗಳ ಮೂಲಕ ಸಮಾಜದಲ್ಲಿ ಬದಲಾವಣೆಗೆ ಭದ್ರ ಬುನಾದಿ ಹಾಕಿದರು ಎಂದು ಹೇಳಿದರು.

ಬಸವಣ್ಣನವರ ಅನುಭವಮಂಟಪದಲ್ಲಿ ಜಾತಿಯ ಹಂಗಿಲ್ಲದೆ ಎಲ್ಲಾ ವರ್ಗದ ವಚನಕಾರರು ವಚನಗಳ ಮೂಲಕ ತಮ್ಮ ಹೊಸ ಚಿಂತನೆಗಳನ್ನು ಕಟ್ಟಿಕೊಡುತ್ತಿದ್ದರು. ಈ ಮೂಲಕ ಜನರಲ್ಲಿ ಜಾಗೃತಿಯನ್ನು ಮೂಡಿಸುವ ಕೆಲಸವನ್ನು ಇವರು ಮಾಡುತ್ತಿದ್ದರು.

ಬಸವಣ್ಣನವರ ಸಾರಥ್ಯದಲ್ಲಿ ನಡೆದ ಸುಧಾರಣೆಯ ಪ್ರಯತ್ನ ಒಂದು ಸಾಮಾಜಿಕ ಚಳವಳಿಯಾಗಿ ರೂಪುಗೊಂಡಿತ್ತು. ಇವರ ತತ್ವ, ಆದರ್ಶಗಳು, ಚಿಂತನೆಗಳು ಇಂದಿಗೂ ಪ್ರಸ್ತುತ. ಇದು ಜೀವನ ಪಾಠವೂ ಹೌದು. ವಿಶ್ವಗುರು ಬಸವಣ್ಣನವರು ಹಾಕಿಕೊಟ್ಟ ದಾರಿಯಲ್ಲಿ ಸಾಗಿದರೆ ಜೀವನ ಸುಖಮಯ, ಸಮಾಜವೂ ಸುಂದರ. 'ಕಾಯಕವೇ ಕೈಲಾಸ' ಎಂದು ಕಲಿಸಿಕೊಟ್ಟವರು ಬಸವಣ್ಣ ಎಂದು ಸ್ಮರಿಸಿದರು.

ನಿವೃತ್ತ ಶಿಕ್ಷಕ ಶಿವರುದ್ರಪ್ಪ ಮಾತನಾಡಿ, ವಚನಗಳ ಮೂಲಕವೇ ಜಗಜ್ಯೋತಿ ಬಸವೇಶ್ವರರು ಜ್ಞಾನದ ಬೆಳಕು ಚೆಲ್ಲಿದ್ದರು. ಕ್ರಾಂತಿಯ ಬೀಜ ಬಿತ್ತಿದ್ದ ಸಮಾಜ ಸುಧಾರಕರಿವರು. ಬಸವಣ್ಣನವರ ಅನುಭವ ಮಂಟಪ ಎಂಬುದೇ ಅದ್ಭುತ ಪರಿಕಲ್ಪನೆ. ಈ ಮೂಲಕ ಎಲ್ಲಾ ವರ್ಗದವರನ್ನೂ ಒಂದೆಡೆ ತರುವ ಪ್ರಯತ್ನವನ್ನು ಬಸವಣ್ಣ ನವರು ಮಾಡಿದ್ದರು. ಇದನ್ನು ವಿಶ್ವದ ಮೊದಲ ಸಂಸತ್ತು ಎಂದೇ ಕರೆಯಲಾಗು ತ್ತದೆ. ತಮ್ಮ ಅದ್ಭುತ ವಚನಗಳ ಮೂಲ ಕವೇ ಎಲ್ಲರಲ್ಲೂ ಹೊಸ ಚಿಂತನೆಯನ್ನು ಹುಟ್ಟುಹಾಕಿದ ಬಸವಣ್ಣನವರ ಜಯಂತಿ ಒಂದು ದಿನಕ್ಕೆ ಮೀಸಲಾಗಿರದೆ ನಿತ್ಯವೂ ಅಣ್ಣನವರ ಆದರ್ಶವನ್ನು ಪ್ರತಿಯೊಬ್ಬರೂ ಅನುಸರಿಸಬೇಕೆಂದರು.

ಲಿಂಗಾಯತ ಮಹಾಸಭಾ ಪದಾಧಿಕಾರಿಗಳಾದ ನಿಜಗುಣ, ಆಲಕೆರೆ ಮಹೇಶ್, ರುದ್ರೇಶ್, ಬೆಳ್ಳಿಯಪ್ಪ, ಉಮೇಶ್, ಶರಣರ ಸಂಘಟನೆಯ ನಂದೀಶ್ ಕಾಡುಕೊತ್ತನ ಹಳ್ಳಿ ಶಿವಲಿಂಗಪ್ಪ ಮೇಣಗೆರೆ, ಜಗದೀಶ್, ಮಹದೇವಪ್ಪ, ಕಾಯಕಯೋಗಿ ಫೌಂಡೇ ಶನ್ ಸಂಸ್ಥೆಯ ತಬ್ಬೆಸ್‌ಖಾನ್, ಯೋಗಿ ಕಿಣಿ ಮತ್ತಿತರರು ಉಪಸ್ಥಿತರಿದ್ದರು.

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-2 | 11-05-2024

ಮಂಡ್ಯ

ಬಸವಣ್ಣನವರ ಪುತ್ಥಳಿ ಸ್ಥಾಪಿಸದಿದ್ದರೆ ಹೋರಾಟ

ಮಂಡ್ಯ: ಕರ್ನಾಟಕದ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದರಷ್ಟೇ ಸಾಲದು ಮಂಡ್ಯ ಜಿಲ್ಲೆಯ ಜನತೆಯ ಹಲವಾರು ವರ್ಷಗಳ ಬೇಡಿಕೆಯಾಗಿರುವ ಅಶ್ವರೂಢ ಬಸವಣ್ಣನವರ ಪುತ್ಥಳಿಯನ್ನು ಡಿಸಿ ಕಚೇರಿ ಎದುರಿನ ಉದ್ಯಾನವನದಲ್ಲಿ ಸ್ಥಾಪಿಸಬೇಕೆಂದು ಲಿಂಗಾಯತ ಮಹಾಸಭಾ ಅಧ್ಯಕ್ಷ ಎಂ.ಎಸ್.ಮಂಜುನಾಥ್ ಬಿಟ್ಟಹಳ್ಳಿ ಒತ್ತಾಯಿಸಿದರು.

ಮಂಡ್ಯ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾಡಳಿತದ ವತಿಯಿಂದ ಆಯೋಜಿಸಲಾಗಿದ್ದ ವಿಶ್ವಗುರು ಬಸವಣ್ಣನವರ ಜಯಂತ್ಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಜಿಲ್ಲಾಧಿಕಾರಿಗಳು ಹಾಗೂ ಅವರ ಜಿಲ್ಲಾಧಿಕಾರಿಗಳಿಗೆ ಕಾರ್ಯಕ್ರಮದ ನಂತರ ಪುತ್ಥಳಿ ಸ್ಥಾಪನೆಯಾಗಬೇಕೆಂದು ಮನವಿ ಮಾಡಿದ ಅವರು, ಹತ್ತಾರು ಬಾರಿ ಈ ಬಗ್ಗೆ ಮನವಿ ನೀಡಿದ್ದರೂ ಪ್ರಯೋಜನವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಣ್ಣ ಬಸವಣ್ಣನವರ ಭಾವಚಿತ್ರವನ್ನು ಎಲ್ಲಾ ಸರ್ಕಾರಿ ಕಚೇರಿಯಲ್ಲೂ ಅಳವಡಿಸಬೇಕೆಂದು ಸರ್ಕಾರ ಆದೇಶ ಮಾಡಿದ್ದರೂ ಜಿಲ್ಲಾಪಂಚಾಯಿತಿಯ ಕಾವೇರಿ ಸಭಾಂಗಣ ಸೇರಿದಂತೆ ಹಲವಾರು ಪೊಲೀಸ್ ಠಾಣೆಗಳು, ಆಸ್ಪತ್ರೆಗಳು, ಗ್ರಾಮಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಸರ್ಕಾರಿ ಶಾಲೆಗಳು ಸೇರಿದಂತೆ ಹಲವು ಸರ್ಕಾರಿ ಕಚೇರಿಗಳಲ್ಲಿ ಬಸವೇಶ್ವರರ



ಭಾವಚಿತ್ರವನ್ನು ಅಳವಡಿಸಲಾಗಿಲ್ಲ. ಬಸವಜಯಂತಿಯಂದು ಸಾರ್ವಜನಿಕರು ಮಾಲಾರ್ಪಣೆ ಮಾಡಲು, ಗೌರವ ಸಲ್ಲಿಸಲು ಮಂಡ್ಯ ನಗರದಲ್ಲಿ ಪುತ್ಥಳಿ ಸ್ಥಾಪಿಸಬೇಕೆಂಬ ಬೇಡಿಕೆಯನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸದಿದ್ದರೆ ಮುಂಬರುವ ದಿನಗಳಲ್ಲಿ ಹತ್ತುಹಲವು ಸಂಘಟನೆಗಳ ಜೊತೆಗೂಡಿ ಹೋರಾಟ ನಡೆಸಬೇಕಾಗುತ್ತದೆಂದು ಎಚ್ಚರಿಸಿದರು.

ಮನವಿಗೆ ಸ್ಪಂದಿಸದ ಜಿಲ್ಲಾಧಿಕಾರಿಗಳು ಹೋರಾಟದ ಹಾದಿ ಬೇಡ ನಿಯೋಮಾವಳಿಗಳನ್ನು ಪರಿಶೀಲಿಸಿ ಬೇಡಿಕೆಗೆ ಸ್ಪಂದಿಸಲಾಗುವುದು ಎಂದರು.

ಬಸವಣ್ಣನವರ ಆಧ್ಯಾತ್ಮಿಕ ಮೌಲ್ಯ, ಚಿಂತನೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು: ಡಾ.ಕುಮಾರ

ಜಿಲ್ಲಾಡಳಿತದಿಂದ ಶ್ರೀ ಬಸವೇಶ್ವರ ಹಾಗೂ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ

ಕಾಯಕಯೋಗಿ ನ್ಯೂಸ್

ಮಂಡ್ಯ: ಬಸವಣ್ಣನವರು ಜ್ಞಾನ ಭಂಡಾರ ವಿದ್ದಂತೆ ಅವರ ಚಿಂತನೆ ಮತ್ತು ಮೌಲ್ಯಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ಕಾವೇರಿ ಸಭಾಂಗಣದಲ್ಲಿ ನಡೆದ ಬಸವಣ್ಣ ಮತ್ತು ಹೇಮರೆಡ್ಡಿ ಮಲ್ಲಮ್ಮ ದಿನಾಚರಣೆ ಕಾರ್ಯಕ್ರಮವನ್ನು ದೀಪ ಬೆಳಗುವುದರ ಮುಖಾಂತರ ಉದ್ಘಾಟಿಸಿ ಕಾರ್ಯಕ್ರಮ ಕುರಿತು ಮಾತನಾಡಿದರು. ಪ್ರತಿ ಮನೆಯಲ್ಲಿ ಮಕ್ಕಳಿಗೆ ಬಸವಣ್ಣನವರ ವಚನಗಳನ್ನು ತಿಳಿಸಿ, ವಚನಗಳ ಮೌಲ್ಯಗಳನ್ನು ಮಕ್ಕಳ ಜೀವನದಲ್ಲಿ ರೂಡಿಸಬೇಕು ಎಂದರು.

ಜಗಜ್ಯೋತಿ ಬಸವಣ್ಣನವರ ಆಧ್ಯಾತ್ಮಿಕ ತತ್ವ ಆದರ್ಶಗಳ ಬಗ್ಗೆ ಪ್ರತಿಯೊಬ್ಬರು ಅರಿತುಕೊಳ್ಳಬೇಕು, ಅವರ ಬಗ್ಗೆ ತಿಳಿಯಲು ಕೇವಲ ತರಗತಿಗಳಲ್ಲಿ ಅಯ್ಕೆ ಮಾಡಿರುವ ಪಾಠಗಳಲ್ಲಿ ಒಂದು ಎರಡು ಪುಟಗಳಲ್ಲಿ ತಿಳಿಯಲು ಸಾಧ್ಯವಿಲ್ಲ ಕಾರಣ ಅವರೊಬ್ಬ ಜ್ಞಾನ ಭಂಡಾರ ವಿದ್ದಂತೆ ಎಂದರು.

ಈಗಿನ ಕಾಲದಲ್ಲಿ ಸಮಾಜವನ್ನು



ಎದುರು ಹಾಕಿಕೊಂಡು ಬದುಕುವುದು ಸುಲಭ ಕಾರಣ ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರಲ್ಲಿ ವಿದ್ಯಾವಂತರಾಗಿದ್ದಾರೆ, ಆದರೆ ಬಸವಣ್ಣನವರು ಅಂದಿನ ಕಾಲದಲ್ಲೇ ಜಾತಿ ಪದ್ಧತಿಯನ್ನು ವಿರೋಧಿಸಿ ಸಮಾಜವನ್ನು ಎದುರು ಹಾಕಿಕೊಂಡು ಜಾತಿ ಪದ್ಧತಿಯನ್ನು ಹೋಗಲಾಡಿಸಲು ಪ್ರತಿಯೊಬ್ಬರಿಗೂ ವಚನಗಳ ಮೂಲಕ ವಿಚಾರ ವಿನಿಮಯ ಮಾಡುತ್ತಿದ್ದರು ಎಂದರು.

ದೇವಾಲಯಕ್ಕೆ ಹೋಗಿ ಕೈ ಮುಗಿದು ಕೊಂಡು ಬಂದರೆ ಸಾಲದು ನಾವು ಮಾಡುವಂತಹ ಕೆಲಸ ಕಾರ್ಯದಲ್ಲಿ ದೇವರನ್ನು ಕಾಣಬೇಕು ಬಸವಣ್ಣನವರ ನುಡಿಯಂತೆ ದೇಹವೇ ದೇಗುಲ, ಶಿರವೇ ಕಳಸ ಎಂಬ ನುಡಿಯನ್ನು ಪಾಲಿಸಬೇಕು, ಮಾನವೀಯತೆಗಿಂತ ದೊಡ್ಡದ್ದು ಯಾವುದು ಇಲ್ಲ ಎಂಬ ಸಂದೇಶವನ್ನು ಜಗತ್ತಿಗೆ ನೀಡಿದವರು ಬಸವಣ್ಣ ನವರು ಎಂದರು.

ಸಾಂಸ್ಕೃತಿಕ ಹರಿಕಾರರಾದ ಬಸವಣ್ಣ ನವರ ವಚನಗಳು ಕರ್ನಾಟಕಕ್ಕೆ ಮಾತ್ರ ಸೀಮಿತವಾಗದೇ ಅವರು ನೀಡಿದ ವಚನ ಗಳ ಪುಸ್ತಕಗಳನ್ನು ಜಗತ್ತಿನಾದ್ಯಂತ ನೋಡಬಹುದು. ಕಾಯಕವೇ ಕೈಲಾಸ ಎಂಬ ತತ್ವವನ್ನು ಎಲ್ಲರೂ ಅಳವಡಿಸಿ ಕೊಳ್ಳಬೇಕು ಎಂದರು.

ಬಸವಣ್ಣ ನವರ ಅನುಭವ ಮಂಟಪ ದಲ್ಲಿ ಲಕ್ಷಾಂತರ ಜನರು ಸೇರಿ ವಿಚಾರ ವಿನಿಮಯ ಮಾಡಿಕೊಳ್ಳುತ್ತಿದ್ದರು ಹಾಗೂ ಅನ್ನ ದಾಸೋಹ ಸಹ ನಡೆಸಲಾಗುತ್ತಿತ್ತು. ಜ್ಞಾನ ಮತ್ತು ಅನ್ನ ದಾಸೋಹ ನಡೆಸುವುದರ ಜೊತೆಗೆ ಜನರಿಗೆ ಅರ್ಥವಾಗುವ ಸರಳವಾಗಿ ವಚನಗಳ ಮೂಲಕ ಜೀವನದ ಸಂದೇಶಗಳನ್ನು ನೀಡಿದರು. ಅವರು ನೀಡಿರುವ ವಚನಗಳು ಇಂದಿಗೂ ಪ್ರಸ್ತುತ ಎಂದರು.

ಮಹಾ ಶರಣೆ ಹೇಮರೆಡ್ಡಿ ಮಲ್ಲಮ್ಮ ಅವರು ಸಾಂಪ್ರದಾಯಿಕ ಕುಟುಂಬದಲ್ಲಿ ಜನಿಸಿ ಮದುವೆ ಆದ ನಂತರ ತನ್ನ ಸಂಸಾರದಲ್ಲಿ ಅಥವಾ ಸುತ್ತಮುತ್ತ ಪರಿಸರದಲ್ಲಿ ಕಂಡಂತಹ ತೊಡಕುಗಳನ್ನು, ಸಮಸ್ಯೆಗಳನ್ನು ಆಧ್ಯಾತ್ಮಿಕ ನೆಲಗಟ್ಟಿಯಲ್ಲೆ ಮನ ಪರಿವರ್ತನೆ ಮಾಡುತ್ತಿದ್ದರು, ಸ್ವತಃ ಆಕೆಯ ಕುಟುಂಬದಲ್ಲಿ ಇದ್ದಂತಹ ಮೈದುನನ ಮನ ಪರಿವರ್ತನೆ ಮಾಡಿದರು ಎಂದು ಹೇಳಿದರು.


ಸಂತ ಶಿಶುನಾಳ ಷರೀಫ್‌ರ ಶಿಷ್ಯ ಆಗಿದ್ದರು. ತನ್ನ ಗುರುಗಳ ಕೈಯಲ್ಲಿ ಹೊಗಳಿಸಿಕೊಂಡಂತಹ ಶಿಷ್ಯೆ ಹೇಮರೆಡ್ಡಿ ಮಲ್ಲಮ್ಮ ಅವರು. ವಿವಾಹಿತ ಜೀವನವನ್ನು ಹೊಂದಿದ್ದರೂ ಕೂಡ ಯಾವುದಕ್ಕೂ ಹಿಂಜರಿಯದೇ ಆಧ್ಯಾತ್ಮಿಕ ಜೀವನದ ಕಡೆ ಹೆಚ್ಚಾಗಿ ಒಲವು ನೀಡಿದರು ಎಂದು ತಿಳಿಸಿದರು.

ಅವರ ಜಿಲ್ಲಾಧಿಕಾರಿ ಡಾ.ಎಚ್.ಎಲ್. ನಾಗರಾಜ್ ಮಾತನಾಡಿ, ಜಗಜ್ಯೋತಿ ಬಸವೇಶ್ವರರು ಇಂದಿಗೂ ಅಮೋಘ ಮತ್ತು ಅದ್ಭುತ ವಾದ ವ್ಯಕ್ತಿಯಾಗಿ ಕಾಣುತ್ತಾರೆ. 12ನೇ ಶತಮಾನದಲ್ಲೆ ಇದ್ದ ಜಾತಿ, ಧರ್ಮ, ಲಿಂಗ, ಅಸ್ಪೃಶ್ಯತೆ ಯಂತಹ ಅಸಮಾನತೆಯ ಅಡ್ಡ ಗೋಡೆಗಳನ್ನು ತೊಡೆದು ಹಾಕಿ, ಜನರಿಗೆ ಧೈರ್ಯ, ಆತ್ಮ ವಿಶ್ವಾಸವನ್ನು ತುಂಬಿ ಸಮಾಜದಲ್ಲಿ ಸಮಾನತೆಯ ಕ್ರಾಂತಿ ಯನ್ನು ನಡೆಸಿ ಕ್ರಾಂತಿಕಾರಿ ಬಸವಣ್ಣ ಎಂದು ಅನಿಸಿಕೊಂಡವರು ಎಂದು ಹೇಳಿದರು.

ಬಸವಣ್ಣ ನವರು ಅನುಯಾಯಿಗ ಳಾಗಿ ಕಾಯಕ ತತ್ವದ ಮೂಲಕ ಅವತ ಆಧ್ಯಾತ್ಮಿಕ ಚಿಂತನೆಗಳನ್ನು ಅಳವಡಿಸಿಕೊಂ ಡಿದ್ದಾರೆ. ಬಸವಣ್ಣ ನವರು ಚಿಂತನೆಗಳನ್ನು ಅಳವಡಿಸಿಕೊಂಡು ನಿರಂತರ ಕಾಯಕದ ಮೂಲಕ ಸಮಾಜ ಕಟ್ಟೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಎಂ.ಬಾಬು ಹಾಗೂ ಸೇರಿದಂತೆ ಇನ್ನಿತರ ಮುಖಂಡರು ಉಪಸ್ಥಿತರಿದ್ದರು.

ಮದ್ದೂರು: ಬಿರುಗಾಳಿ ಮಳೆಗೆ ಅಪಾರ ಹಾನಿ



ಮದ್ದೂರು: ಪಟ್ಟಣದ ಸೇರಿದಂತೆ ತಾಲೂಕಿನ ಹಲವಾರು ಗ್ರಾಮಗಳಲ್ಲಿ ಗುರುವಾರ ರಾತ್ರಿ ಬಂದ ಬಿರುಗಾಳಿ ಮಳೆಯಿಂದ ಮರವೊಂದು ಎತ್ತಿನಗಾಡಿಯ ಮೇಲೆ ಬಿದ್ದು ಜಖಂಗೊಂಡು, ರಸ್ತೆಯಲ್ಲಿ ನೀರು ನಿಂತುಕೊಂಡ ಪರಿಣಾಮ ಸಂಚಾರಕ್ಕೆ ತೊಂದರೆ ಉಂಟಾಗಿತ್ತು.

ಬಿರುಗಾಳಿ ಮಳೆ ಬಂದ ಪರಿಣಾಮ ಪಟ್ಟಣದ ಚನ್ನೇಗೌಡನದೊಡ್ಡಿ ಗ್ರಾಮದ ಮಡಿಕೇರಿ ಮಹದೇವ ಎಂಬುವರ ಎತ್ತಿನಗಾಡಿ ಮೇಲೆ ಭಾರಿ ಗಾತ್ರದ ಮರವೊಂದು ಬಿದ್ದು ಎತ್ತಿನಗಾಡಿ ಸಂಪೂರ್ಣ ಜಖಂಗೊಂಡಿದೆ. ಅದೃಷ್ಟವಶಾತ್ ಯಾವುದೇ ಸಾವು ನೋವುಗಳು ಸಂಭವಿಸಿಲ್ಲ. ಎತ್ತಿನಗಾಡಿಗೆ ಸೂಕ್ತ ಪರಿಹಾರ ಕೊಡಿಸುವಂತೆ ರೈತ ಮಹದೇವ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಗುರುವಾರ ರಾತ್ರಿ ಉತ್ತಮ ಮಳೆ ಬಂದ ಪರಿಣಾಮ ಪಟ್ಟಣದ ಸೇರಿದಂತೆ ತಾಲೂಕಿನ ಕೆಲವು ಹಳ್ಳಿಗಳ ಮಣ್ಣಿನ ರಸ್ತೆಯಲ್ಲಿ ಮಳೆ ನೀರು ನಿಂತುಕೊಂಡು ಸಂಚಾರಕ್ಕೆ ತೊಂದರೆಯಾಗಿ ಸಾರ್ವಜನಿಕರು ಪರದಾಡುವಂತಾಗಿತ್ತು. ಪಟ್ಟಣದ ಗುರುಶಾಂತಪ್ಪ ಸರ್ಕಾರಿ ಆಸ್ಪತ್ರೆಯ ಆವರಣದಲ್ಲಿ ಮಳೆ ನೀರು ನಿಂತುಕೊಂಡ ಪರಿಣಾಮ ರೋಗಿಗಳು ಆಸ್ಪತ್ರೆ ಒಳಕ್ಕೆ ಸುಲಭವಾಗಿ ಹೋಗಲು ಕಷ್ಟವಾಗಿತ್ತು.

ಅಲಯನ್ಸ್ ಸಂಸ್ಥೆಯಿಂದ ಬಸವ ಜಯಂತಿ: ಕಾಯಕಶ್ರೇಷ್ಠ ಪ್ರಶಸ್ತಿ ಪ್ರಧಾನ

ಕಾಯಕಯೋಗಿ ನ್ಯೂಸ್

ಮಂಡ್ಯ: ಸಮಸಮಾಜ ನಿರ್ಮಾಣ ಕ್ಕಾಗಿ ವಚನಸಂದೇಶ ಸಾರಿದ ವಿಶ್ವಗುರು ಬಸವಣ್ಣ ಸಾರ್ವಕಾಲಿಕ ಎಂದು ಅಂತ ರಾಷ್ಟ್ರೀಯ ಅಲಯನ್ಸ್ ಸಂಸ್ಥೆ ನಿರ್ದೇಶಕ ಡಾ.ನಾಗರಾಜು ವಿ.ಭೈರಿ ಹೇಳಿದರು.

ತಾಲೂಕಿನ ಆಲಕೆರೆ ಸಮೀಪವಿರುವ ಮಿನುಗ ಸಭಾಂಗಣದಲ್ಲಿ ಅಂತರಾಷ್ಟ್ರೀಯ ಅಸೋಷಿಯೇಷನ್ ಆಫ್ ಅಲಯನ್ಸ್ ಸಂಸ್ಥೆ ಜಿಲ್ಲೆ268(ಎಸ್) ಮಂಡ್ಯ ಶಾಖೆ ಆಯೋಜಿಸಿದ್ದ ಸಾಂಸ್ಕೃತಿಕ ನಾಯಕ ಬಸವಣ್ಣ ಅವರ ಜಯಂತಿ ಆಚರಣೆ-ವಚನಗಳ ಗಾಯನ ಹಾಗೂ ಕಾಯಕ ಶ್ರೇಷ್ಠ ಪ್ರಶಸ್ತಿ ಪ್ರಧಾನ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಾಯಕವೇ ಕೈಲಾಸ ಎಂದು ಮಾನವ ಕುಲಕ್ಕೆ ಸಂದೇಶವನ್ನು ನೀಡಿದ ಬಸವಣ್ಣ ಸಮಾಜಕ್ಕೆ ತನ್ನದೇ ಆದ ವಚನ, ತತ್ವಗಳ ಮೂಲಕ ಸಾಮಾಜಿಕ ಸಮಸ್ಯೆಗಳ ಬಗ್ಗೆ ಜಾಗೃತಿ ಮೂಡಿಸಿದ ಮಹಾ ಸಂತ ಎಂದು ನುಡಿದರು.

12ನೇ ಶತಮಾನದಲ್ಲಿ ವಿಪರೀತವಾಗಿದ್ದ



ಮೇಲು ಕೀಳು, ಜಾತಿ ಧರ್ಮ ಹೀಗೆ ನೊಂದವರ ಪರವಾಗಿ ನಿಂತ ಮಹಾನು ಭಾವ. ಜಾತಿ ವ್ಯವಸ್ಥೆಯ ವಿರುದ್ಧ ಧ್ವನಿ ಎತ್ತಿದ್ದ ಬಸವಣ್ಣನವರು ಕ್ರಾಂತಿಯ ಬೀಜವನ್ನು ಬಿತ್ತಿದ ಸಾಮಾಜಿಕ ಸುಧಾರಕ ಎಂದು ಸ್ಮರಿಸಿದರು.

ಬಳಿಕ ಮಾತನಾಡಿದ ಅಂತರಾಷ್ಟ್ರೀಯ ಅಲಯನ್ಸ್ ಸಂಸ್ಥೆ ಜಿಲ್ಲಾ ರಾಜ್ಯಪಾಲ ಕೆ.ಟಿ.ಹನುಮಂತು, 12ನೇ ಶತಮಾನದಲ್ಲಿ ಇದ್ದ ಅಸ್ಪೃಶ್ಯತೆ, ವರ್ಗಬೇಧವನ್ನು ತೊಲಗಿ ಸಲು ತಮ್ಮ ಜೀವನವನ್ನೇ ತ್ಯಾಗಮಾಡಿ ಕಾಂತ್ರಿಕಾರಿ ಬಸವಣ್ಣ ಸಾದ ಪ್ರಸ್ತುತ ಎಂದರು.

ರಾಜ್ಯ ಸರ್ಕಾರವು ಬಸವಣ್ಣ ಅವರನ್ನು ಕರ್ನಾಡಕ ಸಾಂಸ್ಕೃತಿಕ ನಾಯಕ ಎಂದು ಘೋಷಿಸಿದೆ, ಅವರು ವಿಶ್ವಗುರು-ವಿಶ್ವ ಜ್ಞಾನಿಯಾಗಿ ವಚನಗಳ ಮೂಲಕ ಸಾಮಾ ಜಿಕ ಕ್ರಾಂತಿಯನ್ನೇ ಮಾಡಿದ್ದಾರೆ, ಇವರ ತತ್ವ ಆದರ್ಶಗಳನ್ನು ನಾವು ಮೈಗೂಡಿ ಸಿಕೊಂಡು ಬಾಳುವುದು ಉತ್ತಮ ಎಂದು ಹೇಳಿದರು.

ಜಗಜ್ಯೋತಿ ಬಸವಣ್ಣ ಅವರು ಎಲ್ಲಾ ಸಮಾಜಕ್ಕೂ ಮಾರ್ಗದರ್ಶಕರಾಗಿದ್ದರು, ಅನುಭವ ಮಂಟಪ ಮೂಲಕ ಸಮಾಜ ಸುಧಾರಣೆಗಾಗಿ ಹೊಸ ನಾಂದಿಯಾಗಿ ದ್ದಾರೆ, ಇಂತಹ ಮಹಾಪುರುಷರನ್ನು ಸದಾ ಸ್ಮರಿಸಿ ನಾವು ಧನ್ಯತೆ ಕಾಣೋಣ ಎಂದರು.


ಇದೇ ಸಂದರ್ಭದಲ್ಲಿ ಹಿರಿಯ ಪತ್ರ ಕರ್ತ ಬಸವರಾಜ್ ಅವರಿಗೆ ಗಣ್ಯರ ಸಮ್ಮುಖದಲ್ಲಿ ಕಾಯಕಶ್ರೇಷ್ಠ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಯಿತು. ಪ್ರತಿಭಾಂಜಲಿ ಪ್ರೊ.ಡೇವಿಡ್ ಅವರು ವಿವಿಧ ವಚನಗಾಯನ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಅಂತರಾಷ್ಟ್ರೀಯ ಅಲಯನ್ಸ್ ಸಂಸ್ಥೆಯ 1ನೇ ಉಪರಾಜ್ಯ ಪಾಲ ಎಚ್.ಮಾದೇಗೌಡ, 2ನೇ ಉಪ ರಾಜ್ಯಪಾಲ ಶಶಿಧರ್‌ಈಚಗೆರೆ, ಜಿಲ್ಲಾ ಸಂಪುಟ ಕಾರ್ಯದರ್ಶಿ ಚಂದ್ರಶೇಖರ್, ಜಿಲ್ಲಾ ಸಂಪುಟ ಖಜಾಂಚಿ ರಕ್ಷಿತ್‌ರಾಜ್, ಪದಾಧಿಕಾರಿಗಳಾದ ರತ್ನಮ್ಮ, ನೀನಾ ಪಟೇಲ್, ಮಂಜುನಾಥ್, ಲೋಕೇಶ್, ಡಾ.ಶಿವಕುಮಾರ್ ಮತ್ತಿತರರಿದ್ದರು.

ಪೂರ್ಣಪ್ರಜ್ಞಾ ಶಾಲೆ ವಿದ್ಯಾರ್ಥಿಗಳ ಸಾಧನೆ

ಮದ್ದೂರು: ಪಟ್ಟಣದ ಶಿವಪುರದ ಪೂರ್ಣಪ್ರಜ್ಞಾ ವಿದ್ಯಾಸಂಸ್ಥೆಯ ವಿದ್ಯಾರ್ಥಿ ಗಳಾದ ಎಸ್.ಖಿಷಿ ಹಾಗೂ ಗಗನ್‌ಗೌಡ ಇಬ್ಬರು ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಪ್ರಥಮ ಹಾಗೂ ಜಿಲ್ಲೆಗೆ ತೃತೀಯ (ಮೂರನೇ) ಸ್ಥಾನ ಪಡೆದಿರುವುದು ಮೆಚ್ಚುಗೆ ವಿಷಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎಚ್.ಕಾಳೀರಯ್ಯ ಪ್ರಶಂಸೆ ವ್ಯಕ್ತಪಡಿಸಿದರು.

ಪಟ್ಟಣದ ಬಿಇಒ ಕಚೇರಿಯಲ್ಲಿ ಶುಕ್ರ ವಾರ ಇಬ್ಬರು ವಿದ್ಯಾರ್ಥಿಗಳನ್ನು ಅಭಿನಂ ದಿಸಿ ಸಿಹಿ ತಿನಿಸಿ ಮಾತನಾಡಿದರು. ಎಸ್. ಖಿಷಿ ಹಾಗೂ ಗಗನ್‌ಎಸ್‌ಗೌಡ ಇಬ್ಬರು ಕ್ರಮವಾಗಿ 619 (ಶೇ.99.04)ಅಂಕಗಳನ್ನು ಪಡೆದು ತಾಲೂಕಿಗೆ ಕೀರ್ತಿ ತಂದಿದ್ದಾರೆ. ಪೂರ್ಣಪ್ರಜ್ಞಾ ವಿದ್ಯಾಸಂಸ್ಥೆಯ ಅಧ್ಯಕ್ಷೆ ಕಸ್ತೂರಿ ಅನಂತೇಗೌಡ ಹಾಗೂ



ಕಾರ್ಯದರ್ಶಿ ಅನಂತೇಗೌಡ ಅವರು ಹಲವಾರು ವರ್ಷಗಳಿಂದ ಪೂರ್ಣಪ್ರಜ್ಞಾ ವಿದ್ಯಾಸಂಸ್ಥೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಯಲ್ಲಿ ಉತ್ತಮ ಫಲಿತಾಂಶ ಹೊರತರುವ ಮೂಲಕ ತಾಲೂಕಿಗೆ ತಮ್ಮದೆಯಾದ ಕೊಡುಗೆ ನೀಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪೂರ್ಣಪ್ರಜ್ಞಾ ಶಾಲೆಯ ಆಡಳಿತ ಮಂಡಳಿ ತಾಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ವಿದ್ಯಾರ್ಥಿಗಳು ಉತ್ತಮವಾಗಿ ಅಂಕಗಳಿಸುವ ನಿಟ್ಟಿನಲ್ಲಿ ತರಬೇತಿ ನೀಡು ತ್ತಿರುವುದು ಮೆಚ್ಚುಗೆ ವಿಷಯವಾಗಿದ್ದು, ಮುಂದೆಯೂ ಇದೇ ರೀತಿಯಲ್ಲಿ ಉತ್ತಮ ಫಲಿತಾಂಶ ಬರುವಂತೆ ವಿದ್ಯಾರ್ಥಿಗಳಿಗೆ ವಿಶೇಷ ವಿದ್ಯಾಭ್ಯಾಸ ನೀಡಲಿ ಎಂದರು.

ಪೂರ್ಣಪ್ರಜ್ಞಾ ವಿದ್ಯಾಸಂಸ್ಥೆಯ ಕಾರ್ಯದರ್ಶಿ ಅನಂತೇಗೌಡ, ಶಿಕ್ಷಣ ಸಂಯೋಜಕ ಮಹೇಶ್ ಇದ್ದರು.



ಮಂಡ್ಯ ವಿಧಾನಸಭಾ ಕ್ಷೇತ್ರದ ಕಸಬಾ ಹೋಬಳಿಯ ಕನ್ನಲಿ ಗ್ರಾಮದ ಚನ್ನೇಗೌಡರ ಸುಪುತ್ರ ನವನೀತ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 623ಅಂಕಗಳನ್ನು ಪಡೆದು ರಾಜ್ಯಕ್ಕೆ ಮೂರನೇ ಸ್ಥಾನ ಹಾಗೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದು, ಶಾಸಕ ಗಣಿಗ ರವಿಕುಮಾರ್‌ಗೌಡ ಅಭಿನಂದಿಸಿದರು.

ವಿ.ಸಿ.ನಾಲೆ ಕಾಮಗಾರಿ ಕಳಪೆ: ದಯಾನಂದ ಆರೋಪ ತ್ವರಿತವಾಗಿ ಪೂರ್ಣಗೊಳಿಸಲು ಒತ್ತಾಯ

ಕಾಯಕಯೋಗಿ ನ್ಯೂಸ್

ಪಾಂಡವಪುರ: ವಿಶ್ವೇಶ್ವರಯ್ಯ ನಾಲಾ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು, ಆಮೆ ಗತಿಯಲ್ಲಿ ಸಾಗುತ್ತಿದೆ. ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ ಜೂನ್ ತಿಂಗಳಲ್ಲಿ ನಾಲೆಗೆ ನೀರು ಹರಿಸ ದಿದ್ದರೆ ರೈತರೊಡಗೂಡಿ ಉಗ್ರ ಪ್ರತಿಭಟನೆ ನಡೆಸಲಾಗುವುದು ಎಂದು ಸರ್ವೋದಯ ಕರ್ನಾಟಕ ಪಕ್ಷದ ತಾಲೂಕು ಅಧ್ಯಕ್ಷ ಎಸ್.ದಯಾನಂದ್ ಎಚ್ಚರಿಸಿದರು.

ವಿ.ಸಿ ನಾಲೆ ಕಾಮಗಾರಿ ನಿರೀಕ್ಷೆಯಂತೆ ನಡೆಯುತ್ತಿಲ್ಲ. ಮೇ ಅಂತ್ಯದೊಳಗೆ ಕಾಮ ಗಾರಿ ಪೂರ್ಣಗೊಳಿಸಿ ಜೂನ್‌ನಿಂದ ನಾಲೆಗೆ ನೀರು ಹರಿಸುತ್ತಾರೆ ಎಂಬ ನಿರೀಕ್ಷೆ ಇತ್ತು. ಕಾಮಗಾರಿಯ ವೇಗ ನೋಡಿದರೆ ಜುಲೈ ಅಂತ್ಯಕ್ಕೂ ಮುಗಿಯು ವುದಿಲ್ಲ ಎನ್ನಿಸುತ್ತಿದೆ. ಮಳೆ ಕೊರತೆಯಿಂದ ಭೀಕರ ಬರಗಾಲ ಎದುರಿಸುತ್ತಿರುವ ರೈತರು ಈಗಾಗಲೇ ಒಂದು ಹಂಗಾಮಿನ ಬೆಳೆ ಬೆಳೆಯದೆ ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರ ಆರ್ಥಿಕ ಪರಿಸ್ಥಿತಿ ತೀರ ಹದಗೆಟ್ಟಿದೆ. ಮುಂಗಾರು ಹಂಗಾಮು ಪ್ರಾರಂಭವಾ ಗುತ್ತಿದ್ದು, ಜೂನ್ ತಿಂಗಳಲ್ಲಿ ರೈತರು ಬಿತ್ತನೆ ಕಾರ್ಯದಲ್ಲಿ ತೊಡಗಿಕ

website: www.kayakayogi.com
ಕಾಯಕ ಯೋಗಿ
KAYAKA YOGI - Regional Daily
ಪುಟ-3 | 11-05-2024
ಮೈಸೂರು

14ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು: ದೇವನೂರು ಮತ್ತು ರಾಜೀವ್‌ನಗರ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ಕ.ವಿ.ಪ್ರ.ನಿ.ನಿ ವತಿಯಿಂದ 2ನೇ ತ್ರೈಮಾಸಿಕ ಅವಧಿಯ ನಿರ್ವಹಣಾ ಕಾಮಗಾರಿಯನ್ನು ಹಮ್ಮಿಕೊಳ್ಳಲಾಗಿರುವುದರಿಂದ ಮೇ.14 ರಂದು ಬೆಳಿಗ್ಗೆ 10 ರಿಂದ ಸಂಜೆ 5:30 ಗಂಟೆಯವರೆಗೆ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ಅನಿಯಮಿತ ನಿಲುಗಡೆಯಾಗಲಿದೆ.

ದೇವನೂರು ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ಬಿ.ಡಿ ಕಾಲೋನಿ, ಅಜೀಜ್ ಸೇಠ್ ನಗರ, 320 ಮನೆ, ಕೆಸರು ಕಾಲೋನಿ, ಮಹದೇವಮ್ಮರ ಮುಖ್ಯ ರಸ್ತೆ ಶಕ್ತಿನಗರ, ರಾಜ್‌ಕುಮಾರ್ ರಸ್ತೆ ಕಲ್ಯಾಣಗಿರಿ, ಅಕ್ಷಯ ಭಂಡಾರ್, ರಮ್ಮನಹಳ್ಳಿ ಕಾಳಿಸಿದ್ದನಹುಂಡಿ, ಹಂಚ್ಯ, ಸಾತಗಳ್ಳಿ, ಗಳಗರಹುಂಡಿ, ನೆಹರು ನಗರ, ಸಾತಗಳ್ಳಿ ಗ್ರಾಮ, ಡಿ.ಟಿ.ಎಸ್ ರಾವ್ ನಗರ, ವಿ.ಟಿ.ಯೂ ಕಾಲೇಜು ಎದುರು, ಸನ್ ಪ್ಯೂರ್ ಬಡಾವಣೆ, ಸಾತಗಳ್ಳಿ ಬಿ ಜೋನ್, ವಿಟಿಯೂ ಕಾಲೇಜು, ಭಾರತ್ ನಗರ, ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ರಾಜೀವ್‌ನಗರ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿರುವ ಮುಖ್ಯ ಪ್ರದೇಶಗಳು: ರಾಜೀವನಗರ 2ನೇ ಹಂತ, ಕ್ರಿಷ್ಚಿಯನ್ ಕಾಲೋನಿ, ಯಾಸಿನ್ ಮಸ್ಜಿದ್, ಎಸ್.ಬಡಾವಣೆ, ಸೂರ್ಯನಾರಾಯಣ ದೇವಸ್ಥಾನ ರಸ್ತೆ, ಆಲ್ ಬಜಾರ್ ಮಸ್ಜಿದ್ ವೃತ್ತ, ಅಂಬೇಡ್ಕರ್ ಭವನ ರಸ್ತೆ, ಕ್ಯೂಬಾ ಮಸ್ಜಿದ್ ವೃತ್ತ, ನಾರಾಯಣ ಹೃದಯಾಲಯ ಆಸ್ಪತ್ರೆ, ಕಾಮನಕೆರೆಹುಂಡಿ, ಕೆ.ಹೆಚ್.ಬಿ. ಬಡಾವಣೆ, ಖಖಬಿ-55, ಆಸೀನಾ ಬಡಾವಣೆ, ರಾಜೀವನಗರ 3ನೇ ಹಂತ ಹಾಗೂ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಹಾಗೂ ಕೈಗಾರಿಕೋದ್ಯಮಿಳು ಸಹಕರಿಸಬೇಕೆಂದು ಚಾ.ವಿ.ಸ.ನಿ.ನಿ.ಯ ನ.ರಾ.ಮೊಹಲ್ಲಾ ವಿಭಾಗದ ಕಾರ್ಯ ಮತ್ತು ಪಾಲನೆಯ ಕಾರ್ಯನಿರ್ವಾಹಕ ಇಂಜಿನಿಯರ್(ಏ), ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಇಎಲ್‌ಇಡಿಗೆ ಅರ್ಜಿ ಆಹ್ವಾನ

ಮೈಸೂರು: 2024-25ನೇ ಸಾಲಿನ ಡಿ.ಇಎಲ್.ಇಡಿ ಯ ಪ್ರವೇಶಾತಿಗೆ ಪ್ರಕ್ರಿಯೆಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ದ್ವಿತೀಯ ಪಿ.ಯು.ಸಿ. ಪರೀಕ್ಷಾ ಫಲಿತಾಂಶದಲ್ಲಿ ಸಾಮಾನ್ಯ ಹಾಗೂ ಇತರೆ ಅಭ್ಯರ್ಥಿಗಳು ಶೇ.50 ರಷ್ಟು, ಪ.ಜಾತಿ ಅಥವಾ ಪ.ಪಂಗಡ ವಿದ್ಯಾರ್ಥಿಗಳು ಶೇ. 45 ರಷ್ಟು ಅಂಕಗಳನ್ನು ಪಡೆದಿರಬೇಕು. ಸಾಮಾನ್ಯ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕ 150 ಹಾಗೂ ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ರೂ.50 ಆಗಿರುತ್ತದೆ.

ಪ.ಜಾತಿ ಅಥವಾ ಪ.ಪಂಗಡದ ವಿದ್ಯಾರ್ಥಿಗಳಿಗೆ ಯಾವುದೇ ದಾಖಲಾತಿ ಶುಲ್ಕ ಇರುವುದಿಲ್ಲ. ಸಾಮಾನ್ಯ ಹಾಗೂ ಇತರೆ ವರ್ಗದವರಿಗೆ ದಾಖಲಾತಿ ಶುಲ್ಕ ರೂ. 3015 ಇರುತ್ತದೆ. (ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರತಿ ವರ್ಷವೂ ಸರ್ಕಾರದ ವತಿಯಿಂದ ಪ್ರೋತ್ಸಾಹ ಧನ ರೂ. 25000 ದೊರೆಯುತ್ತದೆ.)

ಅರ್ಜಿ ಸಲ್ಲಿಸಲು ಜೂ.5 ಕೊನೆಯ ದಿನಾಂಕವಾಗಿದ್ದು, ಆಸಕ್ತ ಅಭ್ಯರ್ಥಿಗಳು ಪ್ರಾಂಶುಪಾಲರಾದ ಗಾಯತ್ರಿ ಟಿ.ಎನ್ ಹಾಗೂ ಉಪನ್ಯಾಸಕರ ದೂ.ಸಂ: 9845621719, 9880977918, 9353326738, 9448611655 ನ್ನು ಸಂಪರ್ಕಿಸಬಹುದು ಎಂದು ಸರ್ಕಾರಿ ಮಹಾರಾಣಿ ಮಹಿಳಾ ಪ್ರಶಿಕ್ಷಣ ಸಂಸ್ಥೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆಗೆ ಶೇ.100ರಷ್ಟು ಫಲಿತಾಂಶ

ಮೈಸೂರು: 2023-24ನೇ ಶೈಕ್ಷಣಿಕ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷಾ ಫಲಿತಾಂಶದಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಲ್ಲಿನ ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆಯು ಶೇ.100 ರಷ್ಟು ಫಲಿತಾಂಶವನ್ನು ಪಡೆದುಕೊಂಡಿದೆ.

ಶಾಲೆಯ ಒಟ್ಟು 10 ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದು ಕೊಂಡಿದ್ದು, 08 ವಿದ್ಯಾರ್ಥಿಗಳು ಸಿ+ ಶ್ರೇಣಿಯಲ್ಲಿ 01 ವಿದ್ಯಾರ್ಥಿ ಬಿ+ ಶ್ರೇಣಿ ಹಾಗೂ 01 ವಿದ್ಯಾರ್ಥಿ ಬಿ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.

ಒಟ್ಟು 425 ಅಂಕಗಳಿಗೆ ಪರೀಕ್ಷೆ ನಡೆದಿದ್ದು, ದರ್ಶನ್ 240 ಅಂಕಗಳು, ಕಾರ್ತಿಕ್ ಕುಮಾರ 248 ಅಂಕಗಳು, ಮದಿಹಾ ಭಾನು 309 ಅಂಕಗಳು, ಪ್ರಜ್ವಲ್ 248 ಅಂಕಗಳು, ರಫಾ 270 ಅಂಕಗಳು, ರಮೇಶ್ 252 ಅಂಕಗಳು, ರವಿಚಂದ್ರವ್ವರ 254 ಅಂಕಗಳು, ಶ್ರೇಯಸ್ ಕುಮಾರ್ ಎಂ.ಆರ್. 254 ಅಂಕಗಳು ,ವಿ ಸಂತೋಷ್ 250 ಅಂಕಗಳು ಹಾಗೂ ವಿಕಾಸ್ ಡಿ 247 ಅಂಕಗಳನ್ನು ಪಡೆದಿರುತ್ತಾರೆ ಎಂದು ತಿಲಕ ನಗರದ ಕಿವುಡ ಮಕ್ಕಳ ಸರ್ಕಾರಿ ಪಾಠಶಾಲೆಯ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

6ನೇ ತರಗತಿ ಪ್ರವೇಶ ಪರೀಕ್ಷೆ

ಮೈಸೂರು: ಮೈಸೂರಿನ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಛೇರಿಯಡಿ ಕಾರ್ಯನಿರ್ವಹಿಸುತ್ತಿರುವ ದೊಡ್ಡಕಾನ್ಯದ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ, ಪಿರಿಯಾಪಟ್ಟಣದ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮತ್ತು ಟಿ.ನರಸೀಪುರದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 6 ನೇ ತರಗತಿ ಪ್ರವೇಶಾತಿಗಾಗಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳಿಗೆ ಮೇ 19 ರಂದು ಬೆಳಿಗ್ಗೆ 11 ರಿಂದ 1 ಗಂಟೆವರೆಗೆ ಪರೀಕ್ಷೆಯನ್ನು ಬೆಂಗಳೂರು-ಮೈಸೂರು ರಸ್ತೆಯ ಶೋಭಾಗಾರ್ಡನ್ ಹತ್ತಿರದ ಮೌಲಾನ ಆಜಾದ ಮಾದರಿ ಶಾಲೆ, ಹಾಗೂ ಹುಣಸೂರಿನ ಬಜಾರ್ ರಸ್ತೆಯಲ್ಲಿರುವ ಮೌಲಾನ ಆಜಾದ್ ಮಾದರಿ ಶಾಲೆ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಮೈಸೂರು: ಕರ್ನಾಟಕ ಸರ್ಕಾರದ ಎಐಟಿಟಿ, ಎಸ್ಸಿಪಿ ಮತ್ತು ಟಿಎಸ್ಪಿ ಯೋಜನೆಯಡಿ ಕರ್ನಾಟಕ ರಾಜ್ಯದಲ್ಲಿ ವಾಸವಾಗಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅರ್ಹ ಯುವಕ, ಯುವತಿಯರಿಗೆ ಉದ್ಯೋಗ ಆಧಾರಿತ ಉಚಿತ ತಾಂತ್ರಿಕ ಕೌಶಲ್ಯಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಟೂಲ್ ಡಿಸೈನ್ನಲ್ಲಿ ಪೋಸ್ಟ್ ಡಿಪ್ಲೊಮಾ ತರಬೇತಿಗೆ ಡಿಪ್ಲೊಮಾ/ಬಿಇ (ಎಂಇ/ಎಇ/ಐಪಿ/ಡಿಟಿಡಿಎಂ/ಡಿಪಿಎಂ) ವಿದ್ಯಾರ್ಹತೆ, ಟೂಲ್ ರೂಮ್ ಮೆಷಿನಿಸ್ಟ್ ತರಬೇತಿಗೆ ಎಸ್.ಎಸ್.ಎಲ್.ಸಿ, ಟೂಲ್ & ಡೈ ಮೇಕರ್ ತರಬೇತಿಗೆ ಎಸ್ ಎಸ್ ಎಲ್ ಸಿ ಮತ್ತು ಐಟಿಐ, ಸಿಎನ್ಸಿ ಟೆಕ್ನೋಲಜಿ ಮತ್ತು ಸಿ.ಎಂ.ಎಂ ತರಬೇತಿಗೆ ಐಟಿಐ/ಡಿಪ್ಲೊಮಾ, ಡಿಸೈನರ್ ಮೆಕ್ಯಾನಿಕಲ್(ಸಿಎಡಿ-ಸಿಎಎಮ್) ತರಬೇತಿಗೆ ಡಿಪ್ಲೊಮಾ ಅಥವಾ ಬಿಇ, ಎಲೆಕ್ಟ್ರೀಷಿಯನ್ ತರಬೇತಿಗೆ ಎಸ್.ಎಸ್.ಎಲ್.ಸಿ. ಅಥವಾ ಐಟಿಐ, ಕನ್ವೆನ್ಷನಲ್ ಮಷೀನ್ಸ್ ಮತ್ತು ಕ್ವಾಲಿಟಿ ಕಂಟ್ರೋಲ್ಸ್ ತರಬೇತಿಗೆ ಎಸ್.ಎಸ್.ಎಲ್.ಸಿ. ಅಥವಾ ಐಟಿಐ, ಸಿಎನ್ಸಿ ಮೆಷಿನ್ ಆಪರೇಟರ್ (ಟರ್ನರ್/ಮಿಲ್ಲರ್) ತರಬೇತಿಗೆ ಎಸ್.ಎಸ್.ಎಲ್.ಸಿ. ಅಥವಾ ಐಟಿಐ, ಉತ್ಪನ್ನ ವಿನ್ಯಾಸ ಎಂಜಿನಿಯರ್ ಸಿಎಡಿ-ಸಿಎಎಂ ತರಬೇತಿಗೆ ಡಿಪ್ಲೊಮಾ ಅಥವಾ ಬಿಇ, ಕ್ವಾಲಿಟಿ ಇನ್ಸ್ಪೆಕ್ಟರ್ ತರಬೇತಿಗೆ ಐಟಿಐ ಅಥವಾ ಡಿಪ್ಲೊಮಾ ಹಾಗೂ ಸಿಎನ್ಸಿ ಪ್ರೋಗ್ರಾಮರ್ ಮತ್ತು ವಿಎಂಸಿ ಮತ್ತು ಟರ್ನಿಂಗ್ ತರಬೇತಿಗೆ ಡಿಪ್ಲೊಮಾ ಅಥವಾ ಬಿ.ಇ ವಿದ್ಯಾರ್ಹತೆಯನ್ನು ಹೊಂದಿರುವ 16 ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಬಹುದಾಗಿದೆ.

ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9945442654 /9980615384 ಅನ್ನು ಸಂಪರ್ಕಿಸಬಹುದು ಎಂದು ಜಿ.ಟಿ.ಟಿ.ಸಿ ಕೇಂದ್ರದ ಸಿ.ಒ.ಇ-ಸಂಯೋಜಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತೆಂಗು ಬೆಳೆ ಪ್ರಾತ್ಯಕ್ಷಿತೆ ತಾಕುಗಳನ್ನು ಅಭಿವೃದ್ಧಿ ಪಡಿಸಲು ಅರ್ಜಿ ಆಹ್ವಾನ

ಮೈಸೂರು: ಮೈಸೂರು ತಾಲ್ಲೂಕಿನ ತೋಟಗಾರಿಕೆ ಇಲಾಖೆಯ ವತಿಯಿಂದ ತೆಂಗು ಬೆಳೆ ಪ್ರಾತ್ಯಕ್ಷಿತೆಗೆ, ತಾಕುಗಳನ್ನು ಅಭಿವೃದ್ಧಿ ಪಡಿಸಲು ಫಸಲಿಗೆ ಬಂದಿರುವ ತೆಂಗಿನ ತೋಟ ಹೊಂದಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

ರೈತರು ಆಧಾರ್ ಕಾರ್ಡ್, ಪಹಣಿ, ಬ್ಯಾಂಕ್ ಪಾಸ್ ಬುಕ್ ಹಾಗೂ ತಾಕಿನ ಛಾಯಚಿತ್ರದೊಂದಿಗೆ ಕಛೇರಿಗೆ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೈಸೂರು ತಾಲೂಕಿನ ಹೋಬಳಿ ಅಧಿಕಾರಿಗಳಾದ ಕಸಬ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ನಂ:9901387284, ಇಲವಾಲ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ನಂ:9986086262, ಜಯಪುರ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ.ನಂ:8904673607, ವರುಣ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿ ಮೊ. ನಂ:7259592484 ನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಪಂಚಾಯತ್ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವಣ್ಣನವರ ತತ್ವ ಪಾಲಿಸಿದರೆ ಅರ್ಥಪೂರ್ಣ ಬದುಕು: ಹಿಸ್ಕಲ್ ಬಸವರಾಜು

ಕಾಯಕಯೋಗಿ ನ್ಯೂಸ್



ಮೈಸೂರು: ಕಾಯ ಮತ್ತು ಕಾಯಕ ವನ್ನು ಕೈಲಾಸವನ್ನಾಗಿಸಿದ ವಿಶ್ವದ ಏಕ ಮಾತ್ರ ವ್ಯಕ್ತಿ ಎಂದರೆ ಅದು ವಿಶ್ವಗುರು ಬಸವಣ್ಣ ಎಂದು ವಿಜಯನಗರ, ಹೆಬ್ಬಾಳು ಬಸವ ಸಮಿತಿಯ ಅಧ್ಯಕ್ಷ ಹಿಸ್ಕಲ್ ಬಸವರಾಜು ಹೇಳಿದರು.

ಶರಣು ವಿಶ್ವವಚನ ಫೌಂಡೇಷನ್ ವತಿಯಿಂದ ಮೈಸೂರಿನ ಬೋಗಾದಿಯ ಶಾರದಾ ನಗರ ರೈಲ್ವೆ ಬಡಾವಣೆಯ ಶರಣು ಕುಟೀರದಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣ ಜಯಂತಿ ಕಾರ್ಯ ಕ್ರಮ ಉದ್ಘಾಟಿಸಿ ಮಾತನಾಡಿದ ಅವರು ನಾವು ಇಂದಿನ ಲೌಕಿಕ ಜೀವನದಲ್ಲಿ ಬಸವಣ್ಣನವರ ವಚನಗಳ ತತ್ವಗಳನ್ನು ಅಳವಡಿಸಿಕೊಂಡರೆ ಅರ್ಥಪೂರ್ಣ ಬದುಕಾಗುತ್ತದೆ. ಕಾಯಕತತ್ವ ನಮ್ಮನ್ನು ಸ್ವಾವಲಂಬಿಗಳನ್ನಾಗಿ ರೂಪಿಸಿ ಆರ್ಥಿಕ ವಾಗಿ ಸದೃಢವನ್ನಾಗಿ ಮಾಡುತ್ತದೆ ಎಂದರು.

ನಂತರ ಬಸವ ಧ್ವಜಾರೋಹಣವನ್ನು ಮಾಡಿ ಮಾತನಾಡಿದ ಮೈಸೂರು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಹೆಳವರಹುಂಡಿ ಸಿದ್ಧಪ್ಪ ದೇಹವನ್ನು ದೇವರು ಎಂದು ಹೇಳಿದ ಬಸವಣ್ಣನವರು ಸ್ಥಾವರವಾಗಿದ್ದ ದೇವರನ್ನು ಜಂಗಮ ಮಾಡಿ, ನೂರಕ್ಕೂ ಹೆಚ್ಚು ಕಾಯಕ ಜೀವಿ ಗಳನ್ನು ಒಂದು ಗೂಡಿಸಿ ವಿಶ್ವದ ಮೊದಲ ಕಾಯಕ ಜೀವಿಗಳ ಸಂಘಟಕರಾಗಿ, ವಿಶ್ವದ ಮೊದಲ ವಯಸ್ಕ, ಮಹಿಳಾ, ಶೋಷಿತರ ಮತ್ತು ನೊಂದವರಕಾರ್ಮಿಕ ಶಿಕ್ಷಣ ತಜ್ಞರೆನಿಸಿಕೊಂಡರು ಎಂದರು.

ನಂತರ ಜಾನಪದ ಗಾಯಕ ಮತ್ತು ಮೈಸೂರು ವಿಶ್ವವಿದ್ಯಾನಿಲಯದ ಸಂಶೋಧಕ ಅಮ್ಮ ರಾಮಚಂದ್ರಜಿ ಮತ್ತು ಆಕಾಶವಾಣಿ ಕಲಾವಿದೆ ಶೈಲಾ ಸಿದ್ಧರಾಮಪ್ಪ ಬಸವಣ್ಣನವರನ್ನು ಕುರಿತು ಬಸವಗೀತೆ, ಜಾನಪದಗೀತೆ ಮತ್ತು ವಚನಗಾಯನ ಮಾಡಿದರು.

ಕವಿಗಳು ಮತ್ತು ಗಾಯಕರಾದ ಎಚ್.ನೇತ್ರಾವತಿ, ವೀಣಾ ನಂದೀಶ್, ಆರತಿ ರಘುವೀರ್, ವಿ. ವಿಮಲ, ಅಕ್ಕಮಹಾದೇವಿ ಮರಮ್ಮಳ್, ವಿ.ಲಿಂಗಣ್ಣ, ಪಾರ್ವತಿ, ಮೀನಾಕ್ಷಿ ಸುಬ್ಬಣ್ಣ, ಎನ್.ಶಾಂತಕುಮಾರಿ, ಪ್ರೇಮ ಮಹೇಶ್, ಮೀನಾಕ್ಷಿ ಚಿಂದ್ರಪ್ಪ, ಸುಮ ಪ್ರಕಾಶ್, ಉಷಾ ನಾಗೇಶ್, ಮೀನಾಕ್ಷಿ, ಉಪಾಸನಾ, ರಾಧಾಮಣಿ, ಚಿನ್ನಬಸಪ್ಪ, ಮಂಜುಳ, ಲೋಕೇಶ್, ಚಿಂದ್ರಕಲಾ ಪ್ರಭಾಕರ್, ಕವಿತಾ ವಾಚನ ಮತ್ತು ವಚನ ಗಾಯನ ಮಾಡಿದರು.

ಶರಣು ವಿಶ್ವವಚನ ಫೌಂಡೇಷನ್ ಸಂಸ್ಥಾಪಕರಾದ ವಚನ ಕುಮಾರಸ್ವಾಮಿ, ರೂಪಕುಮಾರಸ್ವಾಮಿ, ಮೈಸೂರುಜಿಲ್ಲಾ ಶರಣು ವಿಶ್ವವಚನ ಫೌಂಡೇಷನ್ ಅಧ್ಯಕ್ಷ ಆನಿಲ್ ಕುಮಾರ್ ವಾಜಂತ್ರಿ ಲೋಕಮಣಿ ಬಸವರಾಜು, ಪ್ರೊ.ಸಿದ್ಧರಾಮಪ್ಪ, ಎಂ. ಮಹೇಂದ್ರ, ನಂದೀಶ್, ಸುಮತಿ ಲೋಕೇಶ್, ಸಿ.ಕೆ.ವಚನ, ಸಿ.ಕೆ.ಗಿರಿಜೇಶ್ ಉಪಸ್ಥಿತರಿದ್ದರು.

ಕುಡಿಯುವ ನೀರು ಕೊರತೆಯಾಗದಂತೆ ಸಮರ್ಪಕವಾಗಿ ನಿರ್ವಹಿಸಿ: ಅಂಜುಂ ಪರ್ವೇಜ್

ಕಾಯಕಯೋಗಿ ನ್ಯೂಸ್



ಮೈಸೂರು: ಬೋರ್‌ವೆಲ್‌ಗಳನ್ನು ಕೊರೆಸುವ ಮೂಲಕ ಗ್ರಾಮೀಣ ಪ್ರದೇಶ ಗಳಲ್ಲಿ ಕುಡಿಯುವ ನೀರು ಕೊರತೆಯಾಗ ದಂತೆ ಸಮರ್ಪಕವಾಗಿ ನಿರ್ವಹಣೆ ಮಾಡುವಂತೆ ಎಲ್ಲಾ ಅಧಿಕಾರಿಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾ ಪಂಚಾಯತ್ ಮಿನಿ ಸಭಾಂಗಣದಲ್ಲಿ ಜಿಜೆಎಂ, ಕುಡಿಯುವ ನೀರು, ಮ-ನರೇಗಾ ಮತ್ತು ಎಸ್ ಬಿಎಮ್(ಗ್ರಾಮೀಣ) ಯೋಜನೆ ಕುರಿತು ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಬಹುಗ್ರಾಮ ಕುಡಿಯುವ ನೀರಿನ ಯೋಜನೆ, ನೀರಿನ ಪರೀಕ್ಷೆ (WQMS), ಜೆಜೆಎಂ ಯೋಜನೆಯ ಭೌತಿಕ ಮತ್ತು ಆರ್ಥಿಕ ಪ್ರಗತಿ ಕುರಿತು ಪರಿಶೀಲಿಸಿದರು.

ಮ-ನರೇಗಾ ಯೋಜನೆಯ ಕ್ರಿಯಾ ಯೋಜನೆ ಕುರಿತು ಮತ್ತು ಕಾಮಗಾರಿಗಳ ಬಗ್ಗೆ ಪರಿಶೀಲನೆ ಮಾಡಿದರು.

ಅನುಷ್ಠಾನ ಇಲಾಖೆಗಳಲ್ಲಿ ಹೆಚ್ಚಾಗಿ ಕಾಮಗಾರಿಗಳನ್ನು ಕೈಗೆತ್ತಿಗೊಳ್ಳಲು ಸೂಚನೆ ನೀಡಿದರು. ಮ-ನರೇಗಾ ಯೋಜನೆಯಡಿ ಹೆಚ್ಚಿನ ಆಸ್ತಿಗಳ ಸೃಜನೆ ಮತ್ತು ಈಗಾಗಲೇ ಸೃಜಿಸಿರುವ ಆಸ್ತಿಗಳ ನಿರ್ವಹಣೆ ಮಾಡಲು ಅವರು ತಿಳಿಸಿ ದರು.

ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಬೂದು ನೀರು ನಿರ್ವಹಣಾ ಘಟಕ ಕುರಿತು ಹಾಗೂ ಸಮುದಾಯ ಬಚ್ಚಲು ಗುಂಡಿ ಕಾಮಗಾರಿಗಳನ್ನು ಕೈಗೊಳ್ಳಲು ಸೂಚಿಸಿದರು.

ಗ್ರಾಮ ಪಂಚಾಯತಿಗಳಲ್ಲಿ ತೆರಿಗೆ ಸಂಗ್ರಹಣೆ, ಸಕಾಲ, ಬಾಪೂಜಿ ಸೇವಾ ಕೇಂದ್ರ ಮತ್ತು ಡಿಜಿಟಲ್ ಲೈಬ್ರರಿ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಎಂ. ಗಾಯತ್ರಿ, ಉಪಕಾರ್ಯದರ್ಶಿ(ಆಡಳಿತ) ನಾಗರಾಜು, ಉಪಕಾರ್ಯದರ್ಶಿ (ಅಭಿವೃದ್ಧಿ) ಜಗನ್ನಾಥ್ ಮೂರ್ತಿ, ಮುಖ್ಯ ಯೋಜನಾಧಿಕಾರಿ ಮಂಜುನಾಥ್ ಅಂಗಡಿ, ಮುಖ್ಯ ಲೆಕ್ಕಾಧಿಕಾರಿ ಜಿ. ಬಸವರಾಜು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯ ಪಾಲಕ ಅಭಿಯಂತರ ರಂಜಿತ್ ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರ್ ವಿಭಾಗದ ಕಾರ್ಯಪಾಲಕ ಅಭಿಯಂತರರು, ಮ-ನರೇಗಾ ಯೋಜನೆಯ ಅನುಷ್ಠಾನ ಇಲಾಖಾ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿಗಳ ಕಾರ್ಯ ನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು(ಗ್ರಾಉ) ಸೇರಿದಂತೆ ಜಿಲ್ಲಾಮಟ್ಟದ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

ಸಾಲಿಗ್ರಾಮದಲ್ಲಿ ಬಸವ ಜಯಂತಿ ಆಚರಣೆ

ಕಾಯಕಯೋಗಿ ನ್ಯೂಸ್

ಸಾಲಿಗ್

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ–4 | 11–05–2024

ತುಮಕೂರು– ಚಾಮರಾಜನಗರ

ಆಗ್ನೇಯ ಶಿಕ್ಷಕರ ಕ್ಷೇತ್ರ ಚುನಾವಣೆ: ವೇಳಾ ಪಟ್ಟಿ ಪ್ರಕಟ

ತುಮಕೂರು: ಭಾರತ ಚುನಾವಣಾ ಆಯೋಗವು ಕರ್ನಾಟಕ ಆಗ್ನೇಯ ಶಿಕ್ಷಕರ ಕ್ಷೇತ್ರದ ಚುನಾವಣೆ ಸಂಬಂಧ ಮೇ 9ರಂದು ಅಧಿಸೂಚನೆ ಹೊರಡಿಸಿದೆ.

ಅಧಿಸೂಚನೆಯನ್ವಯ ಚುನಾವಣಾ ನಾಮಪತ್ರ ಸಲ್ಲಿಸಲು ಮೇ 16 ಕಡೆಯ ದಿನವಾಗಿದ್ದು, ಮೇ 17ರಂದು ಅಭ್ಯರ್ಥಿಗಳ ನಾಮಪತ್ರಗಳನ್ನು ಪರಿಶೀಲಿಸಲಾಗುವುದು. ನಾಮಪತ್ರ ಹಿಂಪಡೆಯಲು ಮೇ 20ರಂದು ಕಡೆಯ ದಿನವಾಗಿದ್ದು, ಜೂನ್ 1ರಂದು ಬೆಳಿಗ್ಗೆ 8 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದೆ. ಮತ ಎಣಿಕೆ ಕಾರ್ಯ ಜೂನ್ 6ರಂದು ನಡೆಯಲಿದ್ದು, ಜೂನ್ 12ಕ್ಕೆ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ತುಮಕೂರು: ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2024–25ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಒಟ್ಟಾರೆ ಶೇಕಡ 35 ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು. ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ https://dtetech.karnataka.gov.in/kartechnical ಮೂಲಕ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಮೂಲ ದಾಖಲಾತಿಗಳೊಂದಿಗೆ ಮೇ 21ರ ಸಂಜೆ 5 ಗಂಟೆಯೊಳಗೆ ಸಲ್ಲಿಸಬಹುದಾಗಿದೆ. ಮಾಹಿತಿಗಾಗಿ ಮೊ.ಸಂ. 9448647636, 900816036, ದೂ.ಸಂ. 0816–2970104/ 2006134ನ್ನು ಸಂಪರ್ಕಿಸಬಹುದಾಗಿದೆ.

ಮೇ 12ರಂದು ವಿದ್ಯುತ್ ವ್ಯತ್ಯಯ

ತುಮಕೂರು: ಬೆಸ್ಕಾಂ ನಗರ ಉಪ ವಿಭಾಗ–1 ವ್ಯಾಪ್ತಿಯಲ್ಲಿ 100 KVA DTC ಸ್ಥಳಾಂತರಿಸುವ ಕಾಮಗಾರಿ ಕೈಗೊಂಡಿರುವುದರಿಂದ ಮೇ 12ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಚಿಕ್ಕಪೇಟೆ, ಮಂಡಿಪೇಟೆ, ಗಾರ್ಡನ್ ರಸ್ತೆ, ದಿಬ್ಬೂರು, ಪಿ.ಆರ್. ನಗರ, ಜಿ.ಸಿ.ಆರ್.ಕಾಲೋನಿ, ಜೆ.ಸಿ.ರಸ್ತೆ, ವಿನಾಯಕ ನಗರ, ಬಿ.ಜಿ.ಪಾಳ್ಯ ವೃತ್ತ, ಎಸ್ ಮಾಲ್ ಹತ್ತಿರ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸಹಾಯಕ ಕಾರ್ಯ ನಿರ್ವಾಹಕ ಇಂಜಿನಿಯರ್ ನಾಗರಾಜು.ಹೆಚ್. ಪಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಎಸ್‌ಎಸ್‌ಎಲ್‌ಸಿ ಫಲಿತಾಂಶ: ಗಡಿಜಿಲ್ಲೆಯ ಟಾಪ್ 10ರಲ್ಲಿ ಸರ್ಕಾರಿ ಶಾಲೆಯ 8 ವಿದ್ಯಾರ್ಥಿಗಳು

ಕಾಯಕಯೋಗಿ ನ್ಯೂಸ್

ಚಾಮರಾಜನಗರ: ಸರ್ಕಾರಿ ಶಾಲೆ ಎಂದರೆ ಮೂಗು ಮುರಿಯುವವರು ಬಹಳ. ಆದರೆ, ಇಂದು ಪ್ರಕಟಗೊಂಡ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಚಾಮರಾಜನಗರ ಜಿಲ್ಲೆಯ ಟಾಪ್ 10 ವಿದ್ಯಾರ್ಥಿಗಳಲ್ಲಿ 8 ಮಂದಿ ಸರ್ಕಾರಿ ಶಾಲೆಯವರೇ ಆಗಿದ್ದಾರೆ.

ಹೌದು... ಚಾಮರಾಜನಗರದ ಟಾಪ್ 10 ವಿದ್ಯಾರ್ಥಿಗಳಲ್ಲಿ 8 ಮಂದಿ ವಿದ್ಯಾರ್ಥಿಗಳು ಜಿಲ್ಲೆಯ 8 ಮಂದಿ ವಿದ್ಯಾರ್ಥಿಗಳು ಆದರ್ಶ ವಿದ್ಯಾಲಯದ ವಿದ್ಯಾರ್ಥಿಗಳಾಗಿದ್ದು, ಇಬ್ಬರು ಖಾಸಗಿ ಶಾಲೆಯ ವಿದ್ಯಾರ್ಥಿಗಳಾಗಿದ್ದಾರೆ.

ಗುಂಡ್ಲುಪೇಟೆ ಆದರ್ಶ ವಿದ್ಯಾಲಯದ ರಕ್ಷ್ಮಮ್ಮ ಎಂಬ ವಿದ್ಯಾರ್ಥಿನಿ 625 ಕ್ಕೆ 619 ಅಂಕ ಪಡೆಯುವ ಮೂಲಕ ಜಿಲ್ಲೆಯಲ್ಲಿ ನಂ1 ಆಗಿ ಬಂದಿದ್ದಾರೆ. ಕೊಳ್ಳೇಗಾಲದ ಆದರ್ಶ ವಿದ್ಯಾಲಯದ ಸಿ.ವಿ.ಪ್ರಜನ್ ಮತ್ತು ಎಸ್.ಸಂಜನಾ ಎಂಬವರು 618, ಚಾಮರಾಜನಗರ ಆದರ್ಶ ವಿದ್ಯಾಲಯದ ಆರ್ಯ ಎಂಬಾತ 617, ಗುಂಡ್ಲುಪೇಟೆಯ ನಿಸರ್ಗ ವಿದ್ಯಾನಿಕೇತನ ಶಾಲೆಯ ಯಕ್ತಾ 616, ಗುಂಡ್ಲುಪೇಟೆ ಆದರ್ಶ ವಿದ್ಯಾಲಯದ ನಂದಿನಿ, ಗುಂಡ್ಲುಪೇಟೆಯ ಕೈಸ್ಟ್ ಸಿಎಂಐ ಶಾಲೆಯ ಅಂಕಿತಾ 615 , ಕೊಳ್ಳೇಗಾಲದ ಆದರ್ಶ ವಿದ್ಯಾಲಯದ ಉಮ್ಮೇ ಜುಹಾ 614, ಗುಂಡ್ಲುಪೇಟೆ ಆದರ್ಶ ವಿದ್ಯಾಲಯದ ಅಹಲ್ಯಾ 613, ಕೊಳ್ಳೇಗಾಲ ಆದರ್ಶ ವಿದ್ಯಾಲಯದ ಆಫಿಯಾ 612 ಅಂಕ ಪಡೆಯುವ ಮೂಲಕ ಟಾಪ್ 10 ಸ್ಥಾನದಲ್ಲಿದ್ದಾರೆ.

ಸರ್ಕಾರದ ಆದರ್ಶ ವಿದ್ಯಾಲಯದ 8 ಮಂದಿ ಟಾಪ್ 10 ಅಲ್ಲಿ ಇದ್ದರೇ ಇಬ್ಬರು ವಿದ್ಯಾರ್ಥಿಗಳು ಖಾಸಗಿ ಶಾಲೆಯವರಾಗಿದ್ದಾರೆ.

24ನೇ ಸ್ಥಾನಕ್ಕೆ ಕುಸಿತ: 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಫಲಿತಾಂಶದಲ್ಲಿ ಜಿಲ್ಲೆಯು 24ನೇ ಸ್ಥಾನ ಗಳಿಸಿದೆ. ಪರೀಕ್ಷೆಗೆ ಹಾಜರಾದ 11655 ವಿದ್ಯಾರ್ಥಿಗಳ ಪೈಕಿ 8344 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು 71.59ರಷ್ಟು ಫಲಿತಾಂಶ ದಾಖಲಾಗಿದೆ. ಕಳೆದ ವರ್ಷ 94.37 ರಷ್ಟು ಫಲಿತಾಂಶ ಗಳಿಸುವ ಮೂಲಕ ರಾಜ್ಯದಲ್ಲಿ 7ನೇ ಸ್ಥಾನ ಗಳಿಸಿ ಉತ್ತಮ ಸಾಧನೆ ಮಾಡಿತ್ತು ಆದರೆ ಈ ಬಾರಿ ಫಲಿತಾಂಶದಲ್ಲಿ ಇಳಿಕೆ ಕಂಡುಬಂದಿದ್ದು 7ನೇ ಸ್ಥಾನದಿಂದ 24ನೇ ಸ್ಥಾನ ಪಡೆಯುವ ಮೂಲಕ ಫಲಿತಾಂಶದಲ್ಲಿ ಕುಸಿತ ಕಂಡಿದೆ.

ಡಿ.ಕೆ.ಶಿವಕುಮಾರ್ ವಿರುದ್ಧ ಜೆಡಿಎಸ್ ಪ್ರತಿಭಟನೆ



ಕಾಯಕಯೋಗಿ ನ್ಯೂಸ್

ಚಾಮರಾಜನಗರ: ಪೆನ್‌ಡ್ರೈವ್ ಪ್ರಕರಣದ ಸೃಷ್ಟಿಕರ್ತ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜೀನಾಮೆಗೆ ಆಗ್ರಹಿಸಿ ಜೆಡಿಎಸ್ ಕಾರ್ಯಕರ್ತರು ನಗರದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಪಕ್ಷದ ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಹ ಉಸ್ತುವಾರಿ ಬಿ.ಪುಟ್ಟಸ್ವಾಮಿ ಹಾಗೂ ಮುಖಂಡ ಆಲೂರುಮಲ್ಲು ಅವರ ನೇತೃತ್ವದಲ್ಲಿ ಸಮಾವೇಶ ಗೊಂಡ ಪ್ರತಿಭಟನಾನಿರತರು ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತಕ್ಕೆ ತೆರಳಿ ಕೆಲಕಾಲ ರಸ್ತೆತಡೆ ನಡೆಸಿ ಕಾಂಗ್ರೆಸ್ ನಾಯಕರ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ, ಆಕ್ರೋಶ ವ್ಯಕ್ತಪಡಿಸಿದರು.

ನೂಕಾಟ, ತಳ್ಳಾಟ: ನಂತರ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭಾವಚಿತ್ರವನ್ನು ಪ್ರತಿಭಟನಾಕಾರರು ಸುಡಲು ಮುಂದಾದಾಗ ಪೋಲಿಸರು, ಪ್ರತಿಭಟನಾಕಾರರ ನಡುವೆ ನೂಕಾಟ, ತಳ್ಳಾಟ ಉಂಟಾಯಿತು. ಕೊನೆಗೆ ಪ್ರತಿಭಟನಾಕಾರರು ಡಿ.ಕೆ.ಶಿವಕುಮಾರ್ ಭಾವಚಿತ್ರ ಹರಿದು ಹಾಕಿ ಕಿಡಿಕಾರಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಉಸ್ತುವಾರಿ ಬಿ.ಪುಟ್ಟಸ್ವಾಮಿ ಮಾತನಾಡಿ, ಕಾಂಗ್ರೆಸ್ ಸರಕಾರ ತನ್ನ ಹಿಡಿತದಲ್ಲಿ ಅಧಿಕಾರವ ನ್ನಿಟ್ಟುಕೊಂಡು ದುರುಪಯೋಗವನ್ನು ಹೊರಗೆ ತಂದು ಹಂಚುವ ಮೂಲಕ ಮಹಿಳೆಯರ ಮಾನವನ್ನು ಹರಾಜು ಹಾಕಿರುವ ಕಾಂಗ್ರೆಸ್ ನವರು, ಹಂಚಿಕೆ ಮಾಡಿದವರನ್ನು ಹೊರದೇಶಕ್ಕೆ ಕಳುಹಿಸಿದ್ದಾರೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಕಡಬೂರು ಮಂಜುನಾಥ್, ಆಲೂರು ಮಲ್ಲು, ರೇಚಂಬಳ್ಳಿ ಕುಮಾರ್, ಹೊಮ್ಮ ಮಹದೇವಸ್ವಾಮಿ, ವೈ.ಕೆ.ಮೋಳೆ ಸೋಮಣ್ಣ, ಶ್ರೀನಿವಾಸಗೌಡ, ಬಿ.ಎಂ.ಮಹದೇವಸ್ವಾಮಿ, ಸಿದ್ದರಾಜುನಾಯಕ, ಆನಂದ್, ಕ ಮಂಗಳಮ್ಮ, ಪುಷ್ಪಲತಾ,, ರವಿರಾಮು, ಸೋಮು, ರವೀಶ್, ಶಂಕರ್, ಕುಮಾರ್, ಮಹದೇವಸ್ವಾಮಿ, ನಂದೀಶ್,ಶ್ರೀನಾಥ್ ಇತರರು ಭಾಗವಹಿಸಿದ್ದರು.

ಕುಡಿಯುವ ನೀರಿನ ಸಮಸ್ಯೆ: 17 ಹೊಸ ಕೊಳವೆ ಬಾವಿಗಳಿಗೆ ಅನುಮೋದನೆ

ಕಾಯಕಯೋಗಿ ನ್ಯೂಸ್



ತುಮಕೂರು: ಕುಡಿಯುವ ನೀರಿನ ಸಮಸ್ಯೆ ತಲೆದೋರಿರುವ ಜಿಲ್ಲೆಯ ಚಿಕ್ಕ ನಾಯಕನಹಳ್ಳಿ, ಮಧುಗಿರಿ, ಕೊರಟಗೆರೆ ಹಾಗೂ ಶಿರಾ ತಾಲ್ಲೂಕಿನ 17 ಗ್ರಾಮ ಗಳಲ್ಲಿ ಹೊಸ ಕೊಳವೆ ಬಾವಿ ಕೊರೆಸಲು ಅನುಮೋದನೆ ನೀಡಲಾಯಿತು.

ಜಿಲ್ಲಾ ಪಂಚಾಯತಿ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾ ಧಿಕಾರಿ ಜಿ. ಪ್ರಭು ಅವರ ಅಧ್ಯಕ್ಷತೆಯಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ತಾಲೂಕು ಪಂಚಾಯತಿ ಕಾರ್ಯನಿರ್ವಾ ಹಕಾಧಿಕಾರಿ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳೊಂದಿಗೆ ನಡೆದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಮಿಷನ್ ಸಮಿತಿ ಸಭೆಯಲ್ಲಿ ಹೊಸ ಕೊಳವೆಬಾವಿಗಳಿಗೆ ಅನುಮೋದನೆ ನೀಡಲಾಯಿತು.

ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಬಡಕೆಗುಡ್ಡು, ಕಾರೇನಹಳ್ಳಿ, ಭೀಮಸಂದ್ರ, ರಾಯಪ್ಪನಹಟ್ಟಿ, ಕಂದಿಕೆರೆ, ಮಧುಗಿರಿ ತಾಲ್ಲೂಕಿನ ಮಲ್ಲನಾಯಕನಹಳ್ಳಿ, ಭಕ್ತರ ಹಳ್ಳಿ, ಪುಲಮಾಚಿ; ಕೊರಟಗೆರೆ ತಾಲ್ಲೂಕಿನ ತುಂಬಾಡಿ; ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣದ 1ನೇ ಬ್ಲಾಕ್; ಶಿರಾ ತಾಲ್ಲೂಕಿನ ಹುಣಸೇಕಟ್ಟೆ, ತಾವರೇಕೆರೆ ಬೋವಿ ಕಾಲೋನಿ, ರಾಮನಹಳ್ಳಿ, ಗಜಮಾರನ ಹಳ್ಳಿ, ದೇವರಹಳ್ಳಿ, ಸೋರೆಕುಂಟೆ ಹಾಗೂ ಹುಯಿಲ್‌ದೊರೆ ಸೇರಿ ಒಟ್ಟು 17 ಗ್ರಾಮಗ ಳಲ್ಲಿ ಹೊಸ ಕೊಳವೆ ಬಾವಿ ಕೊರೆಯಲು ಸಭೆಯಲ್ಲಿ ಅನುಮೋದನೆ ನೀಡ ಲಾಯಿತು.

ಅನುಮೋದನೆಗೂ ಮುನ್ನ ಜಿಲ್ಲೆಯ ಎಲ್ಲ ತಾಲೂಕು ವ್ಯಾಪ್ತಿಯ ಗ್ರಾಮಗಳಲ್ಲಿ ರುವ ಕುಡಿಯುವ ನೀರಿನ ಸಮಸ್ಯೆ ಸ್ಥಿತಿ–ಗತಿಗಳ ಬಗ್ಗೆ ಜಿ.ಪ್ರಭು ಮಾಹಿತಿ ಪಡೆದರು. ನಂತರ 46.17ಲಕ್ಷ ರೂ. ವೆಚ್ಚದಲ್ಲಿ 17 ಹೊಸ ಕೊಳವೆ ಬಾವಿಗಳನ್ನು ಕೊರೆ ಸಲು ತಯಾರಿಸಿದ ಕ್ರಿಯಾ ಯೋಜನೆಗೆ ಅನುಮೋದನೆ ನೀಡಿ ಮಾತನಾಡಿದ ಅವರು ಹೊಸ ಕೊಳವೆ ಬಾವಿ ಕೊರೆ ಯುವ ಮುನ್ನ ನೀರಿನ ಮೂಲವಿರುವ ಕಡೆ ವೈಜ್ಞಾನಿಕವಾಗಿ ಜಲಬಿಂದು ಗುರು ತಿಸಬೇಕು. ಕೊಳವೆ ಬಾವಿಯಲ್ಲಿ ನೀರು ಬತ್ತಿ ಹೋಗಿರುವ ಹಾಗೂ ಇಳುವರಿ ಕಡಿಮೆಯಾಗಿರುವ ಬಗ್ಗೆ ವರದಿಯಾದ ಜನವಸತಿಗಳಲ್ಲಿ ಮಾತ್ರ ಹೊಸ ಕೊಳವೆ ಬಾವಿಗಳಿಗೆ ಅನುಮೋದನೆ ನೀಡಲಾಗು ವುದು. ಸಭೆಯಲ್ಲಿ ಅನುಮೋದಿಸಿರುವ ಹೊಸ ಕೊಳವೆ ಬಾವಿಗಳನ್ನು ಇನ್ನೆರಡು ದಿನದೊಳಗೆ ಕೊರೆಸಬೇಕು ಎಂದು ನಿರ್ದೇಶನ ನೀಡಿದರು.

ಈಗಾಗಲೇ ಹಲವಾರು ಕೊಳವೆ ಬಾವಿ ವಿಫಲವಾಗಿರುವ ಜನವಸತಿ ಪ್ರದೇಶಗಳಲ್ಲಿ ಹೊಸ ಕೊಳವೆ ಬಾವಿ ಕೊರೆಸುವುದು ಸೂಕ್ತವಲ್ಲವೆಂದು ಸಲಹೆ ನೀಡಿದರಲ್ಲದೆ ಹಿಂದಿನ ಸಭೆಯಲ್ಲಿ ಕುಡಿಯುವ ನೀರಿನ ಜಲಮೂಲಗಳ ಸ್ವಚ್ಛಗೊಳಿಸಿ ವರದಿ ನೀಡಲು ಸೂಚಿಸಲಾಗಿತ್ತು. ಜಲಮೂಲ ಗಳನ್ನು ಸ್ವಚ್ಛಗೊಳಿಸಿದ ಬಗ್ಗೆ ಕೂಡಲೇ ಪಿಡಿಓಗಳು ಕಾರ್ಯನಿರ್ವಾಹಕಾಧಿಕಾರಿ ಗಳ ಮೂಲಕ ದೃಢೀಕರಣ ಪತ್ರವನ್ನು ಜಿಲ್ಲಾ ಪಂಚಾಯತಿಗೆ ಸಲ್ಲಿಸಬೇಕೆಂದು ಸೂಚಿಸಿದರು.

ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗ ಳಿಂದ ನೀರು ಪಡೆದು ಪೂರೈಕೆ ಮಾಡಲು ಅದ್ಯತೆ ನೀಡಬೇಕು. ಖಾಸಗಿ ಕೊಳವೆ ಬಾವಿ ದೊರೆಯದಿದ್ದಲ್ಲಿ ಹೊಸ ಕೊಳವೆ ಬಾವಿ ಕೊರೆಸಲು ಮುಂದಾಗಬೇಕು ಎಂದರಲ್ಲದೆ, ಕುಡಿಯುವ ನೀರಿನ ಸಮಸ್ಯೆ ಕಂಡು ಬಂದ ಗ್ರಾಮಗಳಿಗೆ ತುರ್ತು ಸಂದರ್ಭಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಲು ದರ ನಿಗಧಿ ಗಾಗಿ ಟೆಂಡರ್ ಪ್ರಕ್ರಿಯೆ ಪೂರ್ಣಗೊಂ ಡಿದ್ದು, ಕಾರ್ಯಾದೇಶ ನೀಡಲಾಗುವುದೆಂ ದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ರಮೇಶ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಂಗಧಾ ಮಯ್ಯ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯ ನಿರ್ವಾಹಕ ಇಂಜಿನಿಯರ್ ರವೀಶ್, ವಿವಿಧ ತಾಲ್ಲೂಕಿನ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾ ಯಕ ಕಾರ್ಯನಿರ್ವಾಹಕ ಇಂಜಿನಿಯ ರ್‌ಗಳು ಮತ್ತಿತರರು ಹಾಜರಿದ್ದರು.

ವಿ.ಶ್ರೀನಿವಾಸಪ್ರಸಾದ್ ಎಲ್ಲ ವರ್ಗಗಳ ನಾಯಕ: ಸಿ.ಪುಟ್ಟರಂಗಶೆಟ್ಟಿ

ಕಾಯಕಯೋಗಿ ನ್ಯೂಸ್



ಚಾಮರಾಜನಗರ: ಮಾಜಿ ಸಚಿವ, ಹಾಲಿ ಸಂಸದ ದಿವಂಗತ ವಿ.ಶ್ರೀನಿವಾಸ ಪ್ರಸಾದ್ ಅವರು ದಲಿತ ನಾಯಕರು ಅಲ್ಲದೆ ಎಲ್ಲಾ ಸಮುದಾಯಗಳ ನಾಯಕ ರಾಗಿದ್ದರು ಎಂದು ಶಾಸಕ ಸಿ.ಪುಟ್ಟರಂಗ ಶೆಟ್ಟಿ ಹೇಳಿದರು.

ರಾಮಸಮುದ್ರದ ಆಟೋ ನಿಲ್ದಾಣದಲ್ಲಿ ಮಾಜಿ ಸಚಿವ, ಹಾಲಿ ಸಂಸದ ದಿವಂಗತ ವಿ.ಶ್ರೀನಿವಾಸಪ್ರಸಾದ್ ಅವರ 12 ನೇ ದಿನದ ಉತ್ತರ ಕ್ರಿಯಾದಿ ಮತ್ತು ಭೂಶಾಂತಿ ಕಾರ್ಯಕ್ರಮದ ಅಂಗವಾಗಿ ನಡೆದ ನುಡಿ ನಮನ ಕಾರ್ಯಕ್ರಮದಲ್ಲಿ ಪುಷ್ಪಾರ್ಚನೆ ಮಾಡಿ, ಮಾತನಾಡಿದರು.

ವಿ.ಶ್ರೀನಿವಾಸಪ್ರಸಾದ್ ಅವರು ರಾಜ ಕಾರಣದಲ್ಲಿ ಸುದೀರ್ಘ ಸೇವೆ ಸಲ್ಲಿಸಿ ದರು. ಎಲ್ಲ ಸಮುದಾಯಗಳ ಬಗ್ಗೆ ಅಪಾರ ಪ್ರೀತಿ, ವಿಶ್ವಾಸ ಹೊಂದಿದ್ದರು. ಉಪ್ಪಾರ ಸಮುದಾಯ ವಾಸ ಮಾಡುವ ಮೋಳೆಗಳ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು. ನಾನು ಕೂಡ ರಾಜಕಾರಣದಲ್ಲಿ ಇಷ್ಟುಮಟ್ಟಕ್ಕೆ ಬರಲು ಪ್ರಸಾದ್ ಅವರು ಕಾರಣಕರ್ತರು. ಅವರನ್ನು ಎಂದೆಂದಿಗೂ ಮರೆಯೋದಿಲ್ಲ. ಅವರ ಕುಟುಂಬಕ್ಕೆ ದು:ಖ ಭರಿಸುವ ದೇವರು ಶಕ್ತಿ ಕರುಣಿಸಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ರಾಮಸಮುದ್ರದ ದೊಡ್ಡ ಯಾಜಮಾನ ಬಿ. ನಾಗರಾಜು, ಯಾಜಮಾನರಾದ ಪಾಪಣ್ಣ, ನಂಜುಂಡ, ಬಸವರಾಜು, ಶಿವರಾಜು, ಅಂಜನೇಯ, ಡಿ.ನಂಜಯ್ಯ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ.ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹಮದ್ ಅಸ್ಗರ್, ಮುಖಂಡ ಎ.ಎಚ್.ಖಾನ್,ನಗರ ಸಭಾ ಸದಸ್ಯ ಆರ್. ಎಂ, ರಾಜಪ್ಪ, ವಾಜಿ ಸದಸ್ಯ ಬಸವರಾಜು, ಶ್ರೀನಿವಾಸ್ ಪ್ರಸಾದ್ ಅಭಿಮಾನಿ ಬಳಗದ ಎಲ್, ಪ್ರಸನ್ನ, ಜಿಗುರು ಬಂಗಾರು, ಕೆ, ನಾಗರಾಜು, ವೇಣು ಗೋಪಾಲ್, ಕೇಬಲ್ ಚಿನ್ನಣ್ಣ, ಆಟೋ ರಾಜು, , ಜಿ ರಾಜಪ್ಪ, ರಾಮು, ಮನು, ಕಿಟ್ಟು, ಅಂಬೇಡ್ಕರ್ ಯುವಕ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚೇತನ, ಪದಾಧಿಕಾರಿಗಳು, ಕೆ. ಮಹೇಶ್ ಶಾಮಿಯಾನ, ಮಂಜು ಶ್ರೀಧರ್, ಕಾರ್ಯಯ್ಯ, ಆರ್.ಹೆಚ್.ನಂಜುಂಡ ಸ್ವಾಮಿ (ಪಾಪು), ಆರ್.ಡಿ.ಮಹೇಶ್, ಮಹದೇವಸ್ವಾಮಿ ಕಲರ್ ಇತರರಿದ್ದರು.

ಇಂಡಿಗನತ್ತ ಗ್ರಾಮದ ಗರ್ಭಿಣಿ, ಬಾಣಂತಿಯರಿಗೆ ಪೌಷ್ಠಿಕ ಆಹಾರ



ಕಾಯಕಯೋಗಿ ನ್ಯೂಸ್

ಚಾಮರಾಜನಗರ: ಹನೂರು ತಾಲೂಕಿನ ಮಲೆ ಮಹದೇಶ್ವರ ಬೆಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಇಂಡಿಗನಾಥ ಗ್ರಾಮದ ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಸಿಡಿಪಿಒ ನಂಜಮಣಿ ಪೌಷ್ಠಿಕ ಆಹಾರ ವಿತರಿಸಿದರು.

ಕಳೆದ ಏಪ್ರಿಲ್ 26ರಂದು ನಡೆದ ಮತಗಟ್ಟೆ ದ್ವಂಸ ಪ್ರಕರಣದಲ್ಲಿ ಅಂಗನವಾಡಿ ಕಾರ್ಯಕರ್ತೆ ನ್ಯಾಯಾಂಗ ಬಂಧನದಲ್ಲಿ ರುವುದರಿಂದ ಇಂಡಿಗನತ್ತ ಗ್ರಾಮದ ಬಾಣಂತಿಯರು ಗರ್ಭಿಣಿಯರಿಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಪೌಷ್ಠಿಕ ಆಹಾರ ವಿತರಣೆ ಮಾಡಿದ್ದಾರೆ.

ಇಂಡಿಕ ಮತ್ತು ಗ್ರಾಮದ ಮೂವರು ಗರ್ಭಿಣಿಯರು ಮೂವರು ಬಾಣಂತಿ ಯರು ಆರು ತಿಂಗಳಿನಿಂದ ಮೂರು ವರ್ಷದೊಳಗಿನ 26 ಮಕ್ಕಳು ಮೂರು ವರ್ಷದಿಂದ ಆರು ವರ್ಷದವರೆಗೆ 30 ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಣೆ ಮಾಡ ಲಾಗಿದೆ. ಗರ್ಭಿಣಿಯರಿಗೆ ಗೋಧಿ ಉಪ್ಪಿಟ್ಟು ಮಿಕ್ಸ್, ಅಕ್ಕಿ ಬೇಳೆ ಹಾಲಿನ ಪುಡಿ ಮಕ್ಕಳಿಗೆ ಉಪ್ಪಿಟ್ಟು ಮಿಕ್ಸ್ ಹಾಲಿನ ಪುಡಿ ಹಾಗೂ ಪೌಷ್ಠಿಕ ಆಹಾರಗಳನ್ನು ವಿತರಣೆ ಮಾಡಲಾಗಿದೆ ಎಂದು ತಿಳಿಸಿದರು.

**ಇಂಡಿಗನತ್ತ ಗ್ರಾಮದ 61 ವಿದ್ಯಾರ್ಥಿ ಗಳಿಗೆ ಮಧ್ಯಾಹ್ನ

website: www.kayakayogi.com
ಕಾಯಕಯೋಗಿ
KAYAKA YOGI - Regional Daily
ಪುಟ–5 | 11–05–2024
ಹಾಸನ– ರಾಮನಗರ

ವಿವಿಧ ಕೋರ್ಸಿಗೆ ಅರ್ಜಿ ಆಹ್ವಾನ

ಹಾಸನ: 2024–25ನೇ ಸಾಲಿನ ಡಿ.ಇ.ಎಲ್.ಇಡಿ/ ಡಿ.ಪಿ.ಇಡಿ /ಡಿ.ಪಿ.ಎಸ್.ಇ. ಕೋರ್ಸಿನ ಕನ್ನಡ ಮತ್ತು ಉರ್ದು ಮಾಧ್ಯಮಗಳ ಪ್ರಥಮ ವರ್ಷದ ವ್ಯಾಸಂಗಕ್ಕಾಗಿ ರಾಜ್ಯದಲ್ಲಿನ ಅಂಗೀಕೃತ ಶಿಕ್ಷಕರ ತರಬೇತಿ ಸಂಸ್ಥೆಗಳಲ್ಲಿನ ಸರ್ಕಾರಿ ಕೋಟಾದ ಸೀಟುಗಳನ್ನು ತುಂಬಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಡಿ.ಇ.ಎಲ್.ಇಡಿ/ಡಿ.ಪಿ.ಇಡಿ/ಡಿ.ಪಿ.ಎಸ್.ಇ. ಕೋರ್ಸ್‌ಗಳಿಗೆ ದಾಖಲಾತಿ ಬಯಸುವ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ www.schooleducation.kar.nic.in ಅಂತರಜಾಲ ಆನ್‌ಲೈನ್ ಮೂಲಕ ಜೂ.5ರೊಳಗಾಗಿ ಅರ್ಜಿ ಸಲ್ಲಿಸುವಂತೆ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು (ಅಭಿವೃದ್ಧಿ), ಡಯಟ್ ತಿಳಿಸಿದ್ದಾರೆ.

ಬೆಳೆ ಹಾನಿ ಪರಿಹಾರದ ಕುರಿತು ಸಹಾಯ ವಾಣಿ

ಹಾಸನ: ಜಿಲ್ಲೆಯ ಬೆಳೆ ಹಾನಿ ಪರಿಹಾರದ ಬಗ್ಗೆ ರೈತರಿಗೆ ಮಾಹಿತಿ ನೀಡಲು ಜಿಲ್ಲಾಧಿಕಾರಿಗಳ ಕಛೇರಿ, ಉಪವಿಭಾಗಾಧಿಕಾರಿ ಹಾಸನಟಿ, ಸಕಲೇಶಪುರ ಮತ್ತು 8 ತಾಲ್ಲೂಕು ಕಛೇರಿಗಳಲ್ಲಿ ಸಹಾಯ ವಾಣಿ (ಊಜಟಠಿ ಆಛಜಞ) ಕೇಂದ್ರಗಳನ್ನು ತೆರೆಯಲಾಗಿದ್ದು ರೈತರು ಬೆಳೆ ಹಾನಿ ಪರಿಹಾರದ ಪಾವತಿ ಕುರಿತು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿರುತ್ತದೆ.

ಜಿಲ್ಲಾಧಿಕಾರಿ ಕಾರ್ಯಾಲಯ ಸಹಾಯವಾಣಿ ಸಂಖ್ಯೆಗಳು: ಜಿಲ್ಲಾಧಿಕಾರಿ ಕಾರ್ಯಾಲಯ 08172–261111/ 1077, ಹಾಸನ ಉಪವಿಭಾಗಾಧಿಕಾರಿಗಳ ಕಛೇರಿ 08172– 268403, ಸಕಲೇಶಪುರ ಉಪವಿಭಾಗಾಧಿಕಾರಿಗಳ ಕಛೇರಿ 08173– 244003, ಆಲೂರು ತಹಸೀಲ್ದಾರರ ಕಛೇರಿ 08170– 218222,ಅರಕಲಗೂಡು ತಹಸೀಲ್ದಾರರ ಕಛೇರಿ 08175– 220246,ಅರಸೀಕೆರೆ ತಹಸೀಲ್ದಾರರ ಕಛೇರಿ 6364232270, ಬೇಲೂರು ತಹಸೀಲ್ದಾರರ ಕಛೇರಿ 08177– 222234, ಚನ್ನರಾಯಪಟ್ಟಣ ತಹಸೀಲ್ದಾರರ ಕಛೇರಿ 08176– 252666 , ಹಾಸನ ತಹಸೀಲ್ದಾರರ ಕಛೇರಿ 08172– 268395/ 796375, ಹೊಳೆನರಸೀಪುರ ತಹಸೀಲ್ದಾರರ ಕಛೇರಿ 08175 273261 / 8310544202, ಸಕಲೇಶಪುರ ತಹಸೀಲ್ದಾರರ ಕಛೇರಿ 08173– 244004

6ನೇ ತರಗತಿ ಪ್ರವೇಶಾತಿಗೆ ಸರ್ಕಾರದಿಂದ ಅನುಮೋದನೆ

ರಾಮನಗರ: ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ 826 ಮೊರಾರ್ಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ, ಡಾ. ಬಿ.ಆರ್. ಅಂಬೇಡ್ಕರ್, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾಗಾಂಧಿ, ವಿಕಲ್ಪ ಮಾದರಿ ವಸತಿ ಶಾಲೆ, ಕಾಲೇಜುಗಳ ಪೈಕಿ 807 ವಸತಿ ಶಾಲೆಗಳಲ್ಲಿ ಶೇ 25 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು/ಹೆಚ್.ಐ.ವಿಗೆ ತುತ್ತಾದ ಪೋಷಕರ ಮಕ್ಕಳು, ಒಬ್ಬ ಪೋಷಕರನ್ನು ಹೊಂದಿರುವ ಮಕ್ಕಳು ಅಥವಾ ಅನಾಥ ಮಕ್ಕಳಿಗೆ ಶೇ. 10 ರಷ್ಟು ಮೀಸಲಾತಿಯನ್ನು ನಿಗದಿಪಡಿಸಿ 6ನೇ ತರಗತಿಗೆ ಪ್ರವೇಶ ಕಲ್ಪಿಸಲು ಅನುಮೋದನೆ ನೀಡಿ ಸರ್ಕಾರ ಆದೇಶವನ್ನು ಹೊರಡಿಸಿದೆ.

ಶೇ. 25ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ವಿಕಲಚೇತನ ಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಾದ ರಜಿನಿ ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗೆ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ನಂ. 107, ನೆಲಮಹಡಿ, ಜಿಲ್ಲಾಧಿಕಾರಿಗಳ ಕಚೇರಿ ಸಂಕೀರ್ಣ, ಬಿ.ಎಂ. ರಸ್ತೆ, ರಾಮನಗರ ಜಿಲ್ಲೆ, ದೂ.ಸಂಖ್ಯೆ: 080–29500205 ಅನ್ನು ಸಂಪರ್ಕಿಸಬಹುದಾಗಿದೆ.

ಮೇ 10ರಿಂದ ಕೊಲ್ಲಾಪುರದಮ್ಮ ನಾಡಹಬ್ಬ

ಕನಕಪುರ: ನಗರದ ಪ್ರಸಿದ್ಧ ಗ್ರಾಮದೇವತೆ ಕೊಲ್ಲಾಪುರದಮ್ಮ ದೇವಿಯ ನಾಡಹಬ್ಬ ಮೇ.10ರಿಂದ ಮೂರು ದಿನಗಳ ಕಾಲ ವಿಜೃಂಭಣೆಯಿಂದ ಜರುಗಲಿದೆ. ನಗರದ ಕುರು ಪೇಟೆಯಲ್ಲಿ ನೆಲಸಿರುವ ಕೊಲ್ಲಾಪುರದಮ್ಮ ದೇವಿಯ ಹಬ್ಬದ ಪ್ರಯುಕ್ತ ಶುಕ್ರವಾರ ಸಂಜೆ ಯಳವಾರ, ಶನಿವಾರ ಬೆಳಿಗ್ಗೆ ದೇವಿಯ ಅಗ್ನಿ ಕೊಂಡೋತ್ಸವ, ವಿಶೇಷ ಪೂಜೆ ಕೈಂಕರ್ಯಗಳು, ಮತ್ತು ಸಿಡಿ ಹಾಗೂ ಜನಪದ ಕಲಾ ತಂಡದೊಂದಿಗೆ ವಿವಿಧ ಕಾರ್ಯಕ್ರಮಗಳು ಮತ್ತು ಪೂಜಾ ಕೈಂಕರ್ಯಗಳು ನಡೆಯುತ್ತವೆ ಎಂದು ಚಿಡ್ಡಿದೋಸ್ತ್ ಗ್ರೂಪಿನ ಸಂಘದ ಅಧ್ಯಕ್ಷ ಚಿನ್ನಸ್ವಾಮಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಶ್ರೀ ಲಕ್ಷ್ಮೀನರಸಿಂಹಸ್ವಾಮಿ ಬ್ರಹ್ಮರಥೋತ್ಸವ

ರಾಮನಗರ: ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮದಾಯ ದತ್ತಿಗಳ ಇಲಾಖೆ ವತಿಯಿಂದ ಶ್ರೀ ಕ್ಷೇತ್ರ ಸಾವನದುರ್ಗ ಶ್ರೀ ಲಕ್ಷ್ಮೀನರಸಿಂಹಸ್ವಾಮಿ ದೇವಸ್ಥಾನದಲ್ಲಿ 2024ನೇ ಸಾಲಿನ ಬ್ರಹ್ಮರಥೋತ್ಸವವು ಇದೇ ಮೇ 21 ರಿಂದ ಪ್ರಾರಂಭವಾಗಿ ಮೇ 25ರ ವರೆಗೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ನಡೆಯಲಿದೆ.

ಇದೇ ಮೇ 23ರ ಗುರುವಾರ ಮಧ್ಯಾಹ್ನ 1.45 ಗಂಟೆಗೆ ಸಲ್ಲುವ ಶೋಭಕೃತ ಕ್ರೋಧಿನಾಮ ಸವಂತ್ಸರ, ಉತ್ತರಾಯಣ, ವಸಂತ ಋತು, ವೈಶಾಖ ಮಾಸ, ಕೃಷ್ಣ ಪಕ್ಷ, ಪಾಡ್ಯಮಿ ವಿಶಾಖ ನಕ್ಷತ್ರದಲ್ಲಿ ಶ್ರೀ ಲಕ್ಷ್ಮೀ ನರಸಿಂಗಸ್ವಾಮಿಯವರ ಬ್ರಹ್ಮರಥೋತ್ಸವವು ಜರುಗಲಿದೆ ಎಂದು ಮಾಗಡಿ ತಾಲ್ಲೂಕಿನ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಸ್ಥಾನದ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಸೋಲು– ಗೆಲುವಿನ ಲೆಕ್ಕಾಚಾರ

ರಾಜ್ಯ ಮಾತ್ರವಲ್ಲದೆ ಇಡೀ ದೇಶದ ಗಮನ ಸೆಳೆದ ಡಾ.ಸಿ.ಎನ್.ಮಂಜುನಾಥ್– ಡಿ.ಕೆ.ಸುರೇಶ್





ಕನಕಪುರ: ಪ್ರತಿ ಚುನಾವಣೆ ಮುಗಿಯುತ್ತಿದ್ದಂತೆ ಬೆಟ್ಟಿಂಗ್ ಭರಾಟೆ ಆರಂಭಗೊಳ್ಳುತ್ತಿತ್ತು. ಆದರೆ, ಲೋಕಸಭೆ ಚುನಾವಣೆಯಲ್ಲಿ ರಾಜ್ಯದಲ್ಲಿ ಮೊದಲ ಹಂತದ ಮತದಾನ ನಡೆದು 10 ದಿನ ಕಳೆದರೂ ಬೆಂಗಳೂರು ಗ್ರಾಮಾಂತರ ಲೋಕಸಭೆ ಕ್ಷೇತ್ರದಲ್ಲಿ ಬಾಜಿ ತೇಜಿಯಾಗಿಲ್ಲ.

ಸಾಮಾನ್ಯವಾಗಿ ಮತದಾನ ಮುಗಿದ ಮರು ದಿನದಿಂದಲೇ ಬಹುತೇಕ ಎಲ್ಲ ಕಡೆಗಳಲ್ಲಿಯೂ ತಮ್ಮ ಅಭ್ಯರ್ಥಿಗಳ ಸೋಲು ಗೆಲುವಿನ ಲೆಕ್ಕಾಚಾರ ಆರಂಭಗೊಂಡು ಬೆಟ್ಟಿಂಗ್‌ಗಾಗಿ ಪಂಥಾಹ್ವಾನ ನೀಡಲಾಗುತಿತ್ತು. ಇದರಲ್ಲೂ ಕನಕಪುರ ವಿಧಾನಸಭೆ ಕ್ಷೇತ್ರದಲ್ಲಿಯಂತೂ ಇದು ನಿರೀಕ್ಷೆಗೂ ಮೀರಿ ನಡೆಯುತಿತ್ತು. ಪ್ರತಿ ಚುನಾವಣೆಯಲ್ಲಿ ಬೆಟ್ಟಿಂಗ್ ವೀರರು ಲಕ್ಷ, ಕೋಟಿ ರೂಪಾಯಿ ಲೆಕ್ಕದಲ್ಲಿ ಬಾಜಿ ಕಟ್ಟುತ್ತಿದ್ದರು. ಆದರೆ, ಈ ಬಾರಿ ಬೆಟ್ಟಿಂಗ್ ದಂಧೆ ಇಲ್ಲದೆ ಕನಕಪುರ ಸೇರಿ ಬಹುತೇಕ ಎಲ್ಲ ಕಡೆಗಳಲ್ಲಿಯೂ ಮಂಕಾಗಿ ಆಹ್ವಾನ ನೀಡುವವರೇ ಇಲ್ಲ.

ಪ್ರತಿ ಚುನಾವಣೆ ಮತದಾನ ನಡೆದು ಫಲಿತಾಂಶ ಪ್ರಕಟವಾಗುವ ಮುನ್ನ ಕಣದಲ್ಲಿರುವ ಅಭ್ಯರ್ಥಿಗಳ ಸೋಲು–ಗೆಲುವಿನ ಬಗ್ಗೆ ಬೆಟ್ಟಿಂಗ್ ಜೋರಾಗಿ ಇರುತ್ತಿತ್ತು. ಕಾಂಗ್ರೆಸ್ ಬೆಂಬಲಿಗರಂತೂ ಭಾರಿ ಬೆಟ್ಟಿಂಗ್ ಕಟ್ಟಿಕೊಳ್ಳುತ್ತಿದ್ದರು. ಅಭ್ಯರ್ಥಿಗಳ ಸೋಲು–ಗೆಲುವಿನ ಲೆಕ್ಕಾಚಾರದಲ್ಲಿ ಬಾಜಿ ಕಟ್ಟುವುದು ಪ್ರತಿ ಚುನಾವಣೆಯಲ್ಲಿ ಸಹಜವೆಂಬಂತೆ ನಡೆಯುತ್ತಿತ್ತು. ಗೆಲುವು ಸಾಧಿಸುವ ಅಥವಾ ಲೀಡ್ ಪಡೆದುಕೊಳ್ಳುವ ಅಭ್ಯರ್ಥಿಗಳ ಮೇಲೆ ಬೆಟ್ಟಿಂಗ್ ವೀರರು ಹಣ ಹೂಡುತ್ತಿದ್ದರು. ಆದರೆ, ಈ ಬಾರಿ ಇಂತಹ ಬೆಟ್ಟಿಂಗ್ ದಂಧೆ ತನ್ನಷ್ಟಕ್ಕೆ ತಾನೇ ನಿಂತು ಹೋದಂತೆ ಕಾಣುತ್ತಿದೆ.

ನಡೆದಿದೆ ಚರ್ಚೆ: ಕ್ಷೇತ್ರದಲ್ಲಿ ಬೆಟ್ಟಿಂಗ್ ಮಂಕಾಗಿದ್ದರೂ ಸೋಲು – ಗೆಲುವಿನ ಲೆಕ್ಕಾಚಾರ ಮಾತ್ರ ಜೋರಾಗಿಯೇ ನಡೆದಿದೆ. ಇಬ್ಬರೂ ಅಭ್ಯರ್ಥಿಗಳು ಪ್ರಬಲವಾಗಿ ಇದ್ದ ಕಾರಣದಿಂದಾಗಿ ಮತದಾರರಲ್ಲಿ ಸೋಲು– ಗೆಲುವಿನ ಲೆಕ್ಕಾಚಾರ ಮಾತ್ರ ಕೇಳಿಬರುತ್ತಿದೆ. ಮಂಜುನಾಥ್ ಗೆಲುವಿನ ಬಗ್ಗೆ ಎದುರಾಳಿ ಪಕ್ಷ ಕಾಂಗ್ರೆಸ್ ನವರೇ ಪುಕಾರು ಹಬ್ಬಿಸಿರುವುದು ಬೆಟ್ಟಿಂಗ್‌ಗೆ ಕಡಿವಾಣ ಬೀಳಲು ಮತ್ತೊಂದು ಕಾರಣ ಎನ್ನಲಾಗಿದೆ.

ಬೆಂಗಳೂರು ದಕ್ಷಿಣ ಈ ಬಾರಿ ಡಿ.ಕೆ. ಸುರೇಶ್ ಕೈ ಹಿಡಿಯಲಿದೆ ಎನ್ನುವ ವಿಶ್ವಾಸ ಕಾಂಗ್ರೆಸ್‌ನವರದ್ದಾಗಿದ್ದರೆ, ಎಂದಿಗೂ ಬೆಂಗಳೂರು ಕಮಲದ್ದೇ, 'ಮಂಜುನಾಥ್ ಗೆಲುವು ಶತಸಿದ್ಧ ಎನ್ನುವ ಮಾತು ಬಿಜೆಪಿ ಗರದ್ದು. ಇದರಿಂದಾಗಿ ಬೆಟ್ಟಿಂಗ್ ದಂಧೆ ಇದ್ದರೂ ಬೆರಳೆಣಿಕೆಯಷ್ಟು, ಅಲ್ಲೊಂದು ಇಲ್ಲೊಂದು ಹೊರತುಪಡಿಸಿದರೆ ಹಿಂದಿನಂತೆ ಭಾರಿ ಬೆಟ್ಟಿಂಗ್ ಕಾಣುತ್ತಿಲ್ಲ. ಹೀಗಾಗಿ ಈ ಬಾರಿ ಲೋಕಸಭಾ ಚುನಾವಣೆಯ ಫಲಿತಾಂಶದ ಬೆಟ್ಟಿಂಗ್ ಅಬ್ಬರ ಕಳಾಹೀನ ವಾಗಿದೆ.

ಗಮನ ಸೆಳೆದ ಕ್ಷೇತ್ರ : ಬೆಂಗಳೂರು ಗ್ರಾಮಾಂತರಲೋಕಸಭಾ ಕ್ಷೇತ್ರ ರಾಜ್ಯ ಮಾತ್ರವಲ್ಲದೇ ದೇಶದ ಗಮನವನ್ನು ಸೆಳೆದ ಕ್ಷೇತ್ರ. ಡಿಸಿಎಂ ಡಿ.ಕೆ.ಶಿವಕುಮಾರ್ ಸಹೋದರ ಡಿ.ಕೆ.ಸುರೇಶ್ ಹಾಗೂ ಮಾಜಿ ಪ್ರಧಾನಿ ದೇವೇಗೌಡ ಅಳಿಯ ಜಯದೇವ ಹೃದ್ರೋಗ ಸಂಸ್ಥೆಯ ಮಾಜಿ ನಿರ್ದೇಶಕ ಡಾ.ಸಿ.ಎನ್.ಮಂಜುನಾಥ್ ಅವರ ಸ್ಪರ್ಧೆಯಿಂದಾಗಿ ಇಡೀ ಕ್ಷೇತ್ರ ಎಲ್ಲರ ಗಮನ ಸೆಳೆದಿತ್ತು.

ಅಭ್ಯರ್ಥಿಗಳು ಪರಸ್ಪರ ನಿಂದನೆಗೆ ಇಳಿಯದಿದ್ದರೂ, ಕಾರ್ಯಕರ್ತರು ಮತ್ತು ಇತರ ನಾಯಕರ ನಡುವಿನ ಜಂಗೀ ಕುಸ್ತಿ ವಿಪರೀತಕ್ಕೆ ಹೋಗಿತ್ತು. ಕ್ಷೇತ್ರದಲ್ಲಿ ಚುನಾವಣೆ ನಂತರ ಬೆಟ್ಟಿಂಗ್ ಭರ್ಜರಿಯಾಗಿಯೇ ನಡೆಯುತ್ತದೆ ಎಂದು ಅಂದಾಜಿಸಲಾಗಿತ್ತು. ಆದರೆ, ಮತದಾನವಾಗಿ 10 ದಿನಗಳು ಕಳೆದರೂ ಬೆಟ್ಟಿಂಗ್ ರಂಗು ಪಡೆಯುತ್ತಿಲ್ಲ. ಇದಕ್ಕೆ ಪ್ರಮುಖ ಕಾರಣ, ಡಾ.ಸಿ.ಎನ್.ಮಂಜುನಾಥ್ ಸ್ಪರ್ಧೆ ಎನ್ನಲಾಗುತ್ತಿದೆ.

ಡಾ.ಸಿ.ಎನ್.ಮಂಜುನಾಥ್, ಡಿಕೆ ಸಹೋದರರ ನಿರೀಕ್ಷೆಗೂ ಮೀರಿ ಪೈಪೋಟಿ ನೀಡಿದ ಕಾರಣದಿಂದಾಗಿ 'ಕಾಂಗ್ರೆಸ್ ಕಾರ್ಯಕರ್ತರು ಮುಖಂಡರು ಬಾಜಿ ಕಟ್ಟಲು ಹಿಂದೇಟು ಹಾಕುತ್ತಿದ್ದಾರೆ. ಆತ್ತ ಜೆಡಿಎಸ್ – ಬಿಜೆಪಿ ಮುಖಂಡರಿಗೆ ಗೆಲ್ಲುವ ವಿಶ್ವಾಸವಿದ್ದರೂ, ಏನಾಗುತ್ತೋ ಹೇಳೋಕೆ ಆಗಲ್ಲ ಎನ್ನುವ ಆತಂಕದಲ್ಲಿಯೇ ಅವರು ಬೆಟ್ಟಿಂಗ್‌ಗೆ ಇಳಿಯುತ್ತಿಲ್ಲ.

ಆಲೂಗೆಡ್ಡೆ ಬೆಳೆಯಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತ ಕ್ರಮಗಳು



ಹಾಸನ: 2024–25ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಆಲೂಗಡ್ಡೆ ಬೆಳೆಯಲು ಇಚ್ಛಿಸಿರುವ ರೈತರು ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಮುಂದುವರಿಯುವುದು. 2024–25ನೇ ಸಾಲಿನ ಮಾರ್ಚ್ ಏಪ್ರಿಲ್ ಮಾಹೆಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಪೂರ್ವ ಮುಂಗಾರು ಮಳೆ ಆಗದಿರುವ ಕಾರಣ ಆಲೂಗಡ್ಡೆ ಬಿತ್ತನೆಯನ್ನು ಮುಂದೂಡುವುದು.

ಮೇ 07ನೇ ತಾರೀಖಿನಂದು ಜಿಲ್ಲೆಯ ಹಲವೆಡೆ ಮಳೆಯಾಗಿದ್ದು, ಇನ್ನು 4–5 ಹದವಾದ ಮಳೆಯಾದ ನಂತರ ಆಲೂಗಡ್ಡೆ ಬೇಸಾಯಕ್ಕೆ ಭೂಮಿ ಸಿದ್ಧತೆ ಮಾಡಿಕೊಂಡು ನಂತರ ಬಿತ್ತನೆ ಮಾಡುವುದು ಸೂಕ್ತ. ಹೀಗೆ ಮಾಡುವುದರಿಂದ ಮಣ್ಣಿನ ಉಷ್ಣಾಂಶ ಕಡಿಮೆಯಾಗಿ ಬಿತ್ತನೆ ಮಾಡಿದ ಗೆಡ್ಡೆಗಳು ಮೊಳಕೆಯೊಡೆಯಲು ಸಹಕಾರಿಯಾಗುತ್ತದೆ. ಒಂದೆರಡು ಮಳೆಯಾದ ಕೂಡಲೆ ತರಾತುರಿಯಲ್ಲಿ ಭೂಮಿ ಸಿದ್ಧತೆ ಮಾಡಿ ಬಿತ್ತನೆ ಮಾಡಿದರೆ ಮಣ್ಣಿನ ಉಷ್ಣಾಂಶ ಇನ್ನೂ ಕಡಿಮೆಯಾಗದ ಕಾರಣ ಗೆಡ್ಡೆಗಳು ಕರಗುತ್ತವೆ. ಆದ್ದರಿಂದ ರೈತರು ಇನ್ನು ಕೆಲ ದಿನಗಳ ಕಾಲ ಉತ್ತಮ ಮಳೆಯನ್ನು ನಿರೀಕ್ಷಿಸಿ ಮಳೆಯಾದ ನಂತರ ಬಿತ್ತನೆ ಮಾಡುವುದು ಸೂಕ್ತ.

ಪಂಜಾಬ್, ಜಲಂಧರ್ ರಾಜ್ಯಗಳಿಂದ ಬರುವ ಆಲೂಗಡ್ಡೆಯನ್ನು ರೈತರು ಖರೀದಿಸಿದ ನಂತರ ತಕ್ಷಣ ಬಿತ್ತನೆ ಮಾಡಿದರೆ ಗೆಡ್ಡೆಗಳು ಕರಗುತ್ತವೆ. ರೈತರು ಗೆಡ್ಡೆಗಳನ್ನು ಖರೀದಿಸಿದ ನಂತರ ಅವುಗಳನ್ನು ಸ್ಥಳೀಯ ವಾತಾವರಣಕ್ಕೆ ಹೊಂದಿಕೊಳ್ಳಲು 5–6 ದಿನಗಳ ಕಾಲ ನೆರಳಿನಲ್ಲಿ ಹರಡಿ, ಮೊಳಕೆಗಳು ಬಂದ ನಂತರ ಬಿತ್ತನೆಗೆ ಉಪಯೋಗಿಸಬೇಕು.

ಬಿತ್ತನೆ ಮಾಡುವ ಮುನ್ನ ಗೆಡ್ಡೆಗಳನ್ನು ನೆರಳಿನಲ್ಲಿ 5–7 ದಿನಗಳ ಕಾಲ ಹರಡಿ ಹದಗೊಳಿಸಿ, ಬಿತ್ತನೆಯ ಹಿಂದಿನ ದಿನ ಖಿಡ್ಡಾಂಯವಾಗಿ ಬೀಜೋಪಚಾರ (ಮ್ಯಾಂಕೋಜೆಬ್ 4ಗ್ರಾಂ + ಮೆಟಲಾಕ್ಸಿಲ್ 1 ಗ್ರಾಂ + ಸ್ಟೆಪ್ಟೋಮೈಸಿನ್ ಸಲ್ಫೇಟ್ 0.5ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ 10–15 ನಿಮಿಷಗಳ ಕಾಲ ಬೀಜೋಪಚಾರ ಮಾಡಬೇಕು) ಮಾಡಿ ನಂತರ ನೆರಳಿನಲ್ಲಿ 24 ಗಂಟೆಗಳ ಕಾಲ ಗೆಡ್ಡೆಗಳನ್ನು ಒಣಗಿಸಿ ಬಿತ್ತನೆಗೆ ಬಳಸಬೇಕು.

ಮುಂದುವರೆದು, ಹೆಚ್ಚಿನ ಮಾಹಿತಿಗಾಗಿ ರೈತರುಗಳು ತಮ್ಮ ತಾಲ್ಲೂಕಿನ ಮತ್ತು ಹೋಬಳಿಯ ತೋಟಗಾರಿಕೆ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸುವುದು.

ಪ್ರತಿಷ್ಠಿತ ಶಾಲೆಗೆ ಪ್ರವೇಶಕ್ಕೆ ಅರ್ಜಿ ಆಹ್ವಾನ

ಹಾಸನ: ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಶೈಕ್ಷಣಿಕ ವರ್ಷದಲ್ಲಿ ಪ್ರತಿಷ್ಠಿತ ಶಾಲೆಗೆ 6ನೇ ತರಗತಿ ಪ್ರವೇಶ ಬಯಸುವ ಅರ್ಹ ಪ್ರತಿಭಾವಂತ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

5ನೇ ತರಗತಿಯಲ್ಲಿ ಶೇಕಡ 60 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಉತ್ತೀರ್ಣರಾಗಿರುವ ಹಾಗೂ ವಾರ್ಷಿಕ 2.50 ಲಕ್ಷಕ್ಕಿದಾಯದ ಮಿತಿಯೊಳಗಿರುವ ಅರ್ಹ ವಿದ್ಯಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್ www.sw.kar.nic.in ನಲ್ಲಿ ದಿನಾಂಕ 9.05.2024 ರಿಂದ ದಿ:19.05.2024 ರೊಳಗೆ ಆನ್ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಪ್ರಕಟಣೆ ಹೊರಡಿಸಲಾಗಿದೆ. ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು (ಗ್ರೇಡ್–2), ಸಮಾಜಕಲ್ಯಾಣ ಇಲಾಖೆ, ಸಕಲೇಶಪುರ. ರವರ ಕಛೇರಿಗೆ ಬೇಟಿ ನೀಡಲು ಕೋರಿದೆ.

ಸೂಚನೆಗಳು: ಪ.ಜಾತಿ/ವರ್ಗದ ಹೆಣ್ಣು /ಗಂಡು ಮಕ್ಕಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳನ್ನು ಅರ್ಹತಾ ಪರೀಕ್ಷೆಯ ಮೂಲಕ ಆಯ್ಕೆ ಮಾಡಲಾಗುವುದು. ಸರ್ಕಾರದಿಂದ ಹಾಗೂ ಇಲಾಖೆಯಿಂದ ಅನುಮೋದಿಸಿದ ಶಾಲಾ ಶುಲ್ಕ ನಿರ್ವಹಣಾ ವೆಚ್ಚ ಪಾವತಿಸಲಾಗುವುದು. ಪ್ರತಿಭಾವಂತ ವಿದ್ಯಾರ್ಥಿಯಾಗಿದ್ದು, 5ನೇ ತರಗತಿಯಲ್ಲಿ ಶೇ.60 ಕ್ಕಿಂತ ಹೆಚ್ಚು ಅಂಕ ಪಡೆದಿರಬೇಕು. ಜಾತಿ ಪತ್ರ, ಆದಾಯ ಪತ್ರ, ಬಿ.ಪಿ.ಎಲ್ ರೇಷನ್‌ಕಾರ್ಡ್, 5ನೇ ತರಗತಿ ದೃಡೀಕೃತ ಅಂಕಪಟ್ಟಿ ವಿದ್ಯಾರ್ಥಿ ವ್ಯಾಸಂಗ ಮಾಡುತ್ತಿರುವ ಮಾಧ್ಯಮದ ಬಗ್ಗೆ ಕಡ್ಡಾಯವಾಗಿ ವಿವರ ಸಲ್ಲಿಸುವುದು

ಪೋಷಕರು ವಾರ್ಷಿಕ ವರಮಾನ 2.50 ಲಕ್ಷ ಮಿತಿಯೊಳಗಿರಬೇಕು ಹಾಗೂ ಸರ್ಕಾರಿ ನೌಕರಿಯಲ್ಲಿರಬಾರದು. ಹೊಸದಾಗಿ ಆಯ್ಕೆ ಬಯಸುವ ವಿದ್ಯಾರ್ಥಿಗಳು ಈಗಾಗಲೇ ಸರ್ಕಾರವು ಗುರುತಿಸಿರುವ ಪ್ರತಿಷ್ಠಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರಬಾರದು. ಆನ್ ಲೈನ್ ನಲ್ಲಿ ಅರ್ಜಿ ಸಲ್ಲಸಲು ಕೊನೆಯ ದಿ:19.05.2024 ಆನ್‌ಲೈನ ನಲ್ಲಿ ಸಲ್ಲಿಸಿದ ಅರ್ಜಿಯನ್ನು ಸೂಕ್ತ ದಾಖಲಾತಿಗಳೂಂದಿಗೆ ದಿನಾಂಕದಿ:19.05.2024 ರೊಳಗೆ ಸಹಾಯಕ ನಿರ್ದೇಶಕರು(ಗ್ರೇಡ್–2) ಸಮಾಜ ಕಲ್ಯಾಣ ಇಲಾಖೆ, ಸಕಲೇಶಪುರ ರವರ ಕ್ಛೇರಿಗೆ ತಲುಪಿಸುವುದ

website: www.kayakayogi.com

ಕಾಯಕಯೋಗಿ

KAYAKA YOGI - Regional Daily

ಪುಟ-6 | 11-05-2024

ಬೆಂಗಳೂರು

ಚಿನ್ನ ಖರೀದಿಗೆ ನೂಕು ನುಗ್ಗಲು

ಮಂಡ್ಯ: ನಗರದ ವಿ.ವಿ. ರಸ್ತೆಯಲ್ಲಿರುವ ಪ್ರತಿಷ್ಠಿತ ಚಿನ್ನದ ಶೋರೂಮ್ ಶ್ರೀನಿಧಿ ಗೋಲ್ಡ್‌ನಲ್ಲಿ ಅಕ್ಷಯ ತದಿಗೆ ಎಂದು ಚಿನ್ನ ಖರೀದಿಗೆ ಭಾರಿ ನೂಕು ನುಗ್ಗಲು ಉಂಟಾಯಿತು.

ವೈಶಾಖ ಮಾಸದ ಶುಕ್ಲ ಪಕ್ಷದ ಮೂರನೇ ದಿನವೇ ಅಕ್ಷಯ ತದಿಗೆ. ಚಿನ್ನ ಖರೀದಿಗೆ ಅಕ್ಷಯ ತದಿಗೆ ಅತ್ಯಂತ ಶ್ರೇಷ್ಠ ದಿನ ಎಂದು ಅನಾದಿಕಾಲದಿಂದಲೂ ಜನರು ನಂಬಿಕೊಂಡು ಬಂದಿದ್ದಾರೆ. ದ್ವಾಪರ ಯುಗದಲ್ಲಿ ಶ್ರೀ ಕೃಷ್ಣನು ತನ್ನ ಸ್ನೇಹಿತನಾದ ಕುಚೇಲನಿಗೆ ಅಕ್ಷಯಪಾತ್ರೆಯನ್ನು ನೀಡಿದ ದಿನವಿದು. ತ್ರೇತಾಯುಗದಲ್ಲಿ ಶ್ರೀರಾಮನ ಪಟ್ಟಾಭಿಷೇಕವಾದ ದಿನವಿದು ಎಂದು ಪುರಾಣ ಕಥೆಗಳು ಹೇಳುತ್ತವೆ.

ಇಂದಿನ ದಿನಗಳಲ್ಲಿ ಅಕ್ಷಯ ತದಿಗೆ ವರುಷ ಕಳೆದಂತೆ ಹೆಚ್ಚು ಹೆಚ್ಚು ಪ್ರಚಲಿತವಾಗುತ್ತಿದೆ. ಕಳೆದ ಕೆಲವು ವರ್ಷಗಳಲ್ಲಿ ಅಕ್ಷಯ ತದಿಗೆ ಕೇವಲ ಚಿನ್ನ ಖರೀದಿಗೆ ಮಾತ್ರ ಸೀಮಿತವಾಗಿತ್ತು, ಆದರೆ ಇಂದಿನ ದಿನಗಳಲ್ಲಿ ಬೆಳ್ಳಿ, ವಾಹನ, ಭೂಮಿ ಖರೀದಿಗೂ ಅಕ್ಷಯ ತದಿಗೆ ಶ್ರೇಷ್ಠವೆನಿಸಿದೆ. ಮಂಡ್ಯದ ಹೆಸರಾಂತ ಸ್ವರ್ಣ ಮಳಿಗೆ ಶ್ರೀನಿಧಿ



ಗೋಲ್ಡ್‌ನಲ್ಲಿ ಕಳೆದ ಒಂದು ತಿಂಗಳಿಂದ ಮುಂಗಡ ಬುಕಿಂಗುಗಳು ಪ್ರಾರಂಭಗೊಂಡಿತ್ತು. ಚಿನ್ನ ಖರೀದಿಸಿದಷ್ಟೇ ತೂಕದ ಬೆಳ್ಳಿ ಉಚಿತ ಎಂಬ ಭಾರಿ ಆಫರ್ ನೀಡಿದರು. ಅದರಿಂದ ಇಂದು ಶ್ರೀನಿಧಿ ಗೋಲ್ಡ್ ನಲ್ಲಿ ಬೆಳಿಗ್ಗೆ 9 ರಿಂದಲೇ ಚಿನ್ನ ಖರೀದಿಗೆ ಜನ ಸರತಿ ಸಾಲಿನಲ್ಲಿ ನಿಂತು ಚಿನ್ನ ಖರೀದಿಸಿದರು.

ಸ್ಮಶಾನ ಜಾಗ ಮಂಜೂರು ಮಾಡುವಂತೆ ಆಗ್ರಹ: ತಾಲೂಕು ಕಚೇರಿ ಮುಂದೆ ಶವ ಇಟ್ಟು ಪ್ರತಿಭಟನೆ

ಕನಕಪುರ: ಸ್ಮಶಾನ ಜಾಗ ಮಂಜೂರು ಮಾಡಿ ಕೊಡುವಂತೆ ತಾಲೂಕು ಕಚೇರಿ ಮುಂಭಾಗದಲ್ಲಿ ಶವವಿಟ್ಟು ದಲಿತ ಪರ ಸಂಘಟನೆ ಮುಖಂಡರು ಪ್ರತಿಭಟನೆ ನಡೆಸಿದರು.

ನಗರದ ತಾಲೂಕು ಕಚೇರಿ ಆವರಣದಲ್ಲಿ ಶವವಿಟ್ಟು ದಲಿತ ಪರ ಸಂಘಟನೆ ಮುಖಂಡರು, ಮೃತರ ಕುಟುಂಬ ಹಾಗೂ ಗ್ರಾಮದ ಜನರು ತಾಲೂಕು ಆಡಳಿತದ ವಿರುದ್ಧ ಧಿಕ್ಕಾರ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ತಾಲೂಕಿನ ಕಸಬಾ ಹೋಬಳಿಯ ಕುರುಬಳ್ಳಿ ಗ್ರಾಮದ ಪರಿಶಿಷ್ಟ ಜಾತಿ ಸಮುದಾಯದ ಚಿಂದಯ್ಯ (70) ಎಂಬ ವ್ಯಕ್ತಿ ಮೃತಪಟ್ಟಿದ್ದು ಕುರುಬಳ್ಳಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದಲ್ಲಿ ಯಾರಾದರೂ ಮೃತಪಟ್ಟರೆ ಶವ ಸಂಸ್ಕಾರ ಮಾಡಲು ಸ್ಮಶಾನ ಜಾಗ ಇಲ್ಲ ಎಂದು



ಆಕ್ರೋಶಗೊಂಡ ದಲಿತ ಪರ ಸಂಘಟನೆ ಮುಖಂಡರು ಹಾಗೂ ಮೃತರ ಕುಟುಂಬ ಸ್ಥರು, ಗ್ರಾಮಸ್ಥರು ಕುರುಬ ಹಳ್ಳಿ ಗ್ರಾಮ ದಿಂದ ಶವವನ್ನು ತಂದು ತಾಲೂಕು ಕಚೇರಿ ಮುಂಭಾಗದಲ್ಲಿ ಇಟ್ಟು ಪ್ರತಿಭಟನೆ ನಡೆಸಿ ತಾಲೂಕು ಆಡಳಿತ ಮತ್ತು ಜಿಲ್ಲಾಡಳಿತದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಕುರುಬಳ್ಳಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಸಮುದಾಯದಲ್ಲಿ ಮೃತಪಟ್ಟರೆ ಅವರ ಶವಸಂಸ್ಕಾರ ಮಾಡಲು ಸ್ಮಶಾನದ ಜಾಗ ಇಲ್ಲ ಸರ್ವೆ ನಂ. 118 ರಲ್ಲಿ ಬಂಡೆ ಇರುವ 15 ಗುಂಟೆ ಜಾಗವನ್ನು ತಾಲೂಕು ಆಡಳಿತ ಸ್ಮಶಾನಕ್ಕೆ ಮಂಜೂರು ಮಾಡಿದೆ ಅಲ್ಲಿ ಶವಸಂಸ್ಕಾರ ಮಾಡುವುದಾದರೂ ಹೇಗೆ ಜೊತೆಗೆ ಸ್ಮಶಾನಕ್ಕೆ ಹೋಗಲು ರಸ್ತೆಯೇ ಇಲ್ಲ ಶವವನ್ನು ಸ್ಮಶಾನಕ್ಕೆ ತೆಗೆದುಕೊಂಡು ಹೋಗಲು ರಸ್ತೆಯನ್ನು ಯಾರು ಬಿಡುವುದಿಲ್ಲ ವ್ಯಕ್ತಿ ಮೃತಪಟ್ಟು ಒಂದು ದಿನ ಕಳೆದಿದ್ದು ತಾಲೂಕು ಆಡಳಿತವೇ ಶವ ಸಂಸ್ಕಾರ ಮಾಡುವಂತೆ ಪಟ್ಟು ಹಿಡಿದರು.

ತಾಲೂಕು ಕಚೇರಿ ಮುಂಭಾಗದಲ್ಲಿ ಶವವಿಟ್ಟು ಪ್ರತಿಭಟನೆ ನಡೆಸುತ್ತಿದ್ದಂತೆ ಸ್ಥಳಕ್ಕೆ ತಹಸಿಲ್ದಾರ್ ಸ್ಮಿತಾ ರಾಮು, ವೃತ್ತ ನಿರೀಕ್ಷಕ ಕೃಷ್ಣ ಲಮಾಣಿ ಸ್ಥಳಕ್ಕೆ ಭೇಟಿ ನೀಡಿ ಮೃತರ ಕುಟುಂಬಕ್ಕೆ ಸಾಂತ್ವನ ಹೇಳಿ ಸ್ಮಶಾನಕ್ಕೆ ಜಾಗ ಮಂಜೂರು ಮಾಡಿಕೊಡುವುದಾಗಿ ಭರವಸೆ ನೀಡಿ ಮೃತರ ಶವವನ್ನು ಸಂಸ್ಕಾರ ಮಾಡಲು ಕುರುಬಳ್ಳಿ ಗ್ರಾಮಕ್ಕೆ ಸ್ಥಳಾಂತರಿಸಿದರು.

ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಶಿವಕುಮಾರ್,ತಾಲೂಕು ಪಂಚಾಯಿತಿ ಇಒ, ತಹಸಿಲ್ದಾರ್ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಕುರುಬಳ್ಳಿ ಗ್ರಾಮದಲ್ಲಿ ಮಂಜುರಾಗಿರುವ ಸ್ಮಶಾನದ ಅಕ್ಕಪಕ್ಕದ ರೈತರ ಮನವೊಲಿಸಿ ಜಿಪಿಎಸ್‌ನಲ್ಲಿ ಚಿಂದಯ್ಯನ ಶವ ಸಂಸ್ಕಾರವನ್ನು ನಡೆಸಿ ಇನ್ನು15 ದಿನದ ಒಳಗಾಗಿ ಸರ್ಕಾರಿ ಜಾಗವನ್ನು ಗುರುತಿಸಿ ಸ್ಮಶಾನ ಮಂಜೂರು ಮಾಡಿಕೊಡುವು ದಾಗಿ ಭರವಸೆ ನೀಡಿದರು.

ದಲಿತ ಮುಖಂಡ ಶಿವಲಿಂಗಯ್ಯ, ಮಲ್ಲಿಕಾರ್ಜುನ್, ಗೋಪಿ, ರಾಜ್ ಮೌರ್ಯ, ನಟರಾಜು, ಜೀವನ ಮೂರ್ತಿ, ಗ್ರಾಮಸ್ಥರಾದ ನಿಖಿಲ್, ರಾಮಕೃಷ್ಣ, ಕರಿಯಪ್ಪ, 'ರತ್ ಕುಮಾರ್ ಸೇರಿದಂತೆ ಊರಿನ ಗ್ರಾಮಸ್ಥರು ಉಪಸ್ಥಿತರಿದ್ದರು.

> **ಜಿಲ್ಲೆ ಮತ್ತು ತಾಲೂಕಿನಲ್ಲಿ ಕೆಲವು ಗ್ರಾಮಗಳಲ್ಲಿ ಶವಸಂಸ್ಕಾರ ಮಾಡಲು ಸ್ಮಶಾನದ ಜಾಗಗಳಿಲ್ಲ ಸ್ಮಶಾನ ಇಲ್ಲದಿರುವ ಗ್ರಾಮದಲ್ಲಿ ಸ್ಮಶಾನಕ್ಕೆ ಜಾಗ ಮಂಜೂರು ಮಾಡಬೇಕು ಜಿಲ್ಲೆಯಾದ್ಯಂತ ಮಂಜೂರಾಗಿರುವ ಹಿಂದೂ ರುದ್ರಭೂಮಿಗಳನ್ನು ಅಭಿವೃದ್ಧಿಪಡಿಸಿ ಶವ ಸಂಸ್ಕಾರಕ್ಕೆ ಅನುಕೂಲ ಕಲ್ಪಿಸಬೇಕು ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು.**
>
> **– ಮಲ್ಲಿಕಾರ್ಜುನ್, ಅಧ್ಯಕ್ಷ, ದಮ್ಮ ದೀವಿಗೆ ಟ್ರಸ್ಟ್**

ಅದರ್ಶ ಶಾಲೆಯ ಬಾಲಕಿ ತಾಲೂಕಿಗೆ ಪ್ರಥಮ

ಯಳಂದೂರು: ಮಾರ್ಚ್ ಏಪ್ರಿಲ್ ತಿಂಗಳಲ್ಲಿ ನಡೆದ ಹತ್ತನೇತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಯಳಂದೂರು ತಾಲೂಕು ಶೇ.72.56% ಫಲಿತಾಂಶವನ್ನು ಪಡೆದುಕೊಂಡಿದೆ ಎಂದು ಬಿಇಒ ಕೆ.ಕಾಂತರಾಜು ತಿಳಿಸಿದರು.

ನಮ್ಮ ತಾಲೂಕಿನಲ್ಲಿ ಹತ್ತನೆ ತರಗತಿಯ ವಾರ್ಷಿಕ ಪರೀಕ್ಷೆಗೆ 882 ವಿದ್ಯಾರ್ಥಿಗಳು ಹಾಜರಾಗಿದ್ದು 640 ವಿದ್ಯಾರ್ಥಿಗಳು ತೇರ್ಗಡೆಯೊಂದಿದ್ದಾರೆ. ತಾಲೂಕಿನ ಮೆಳಹಳ್ಳಿ ದುಗ್ಗಟ್ಟಿ ಗ್ರಾಮದಲ್ಲಿರುವ ಆದರ್ಶ ಪ್ರೌಢಶಾಲೆ ವಿಧ್ಯಾರ್ಥಿನಿ ಸುಪ್ರಿಯ ಎಸ್ 602 ಅಂಕಗಳನ್ನು ಪಡೆದು ತಾಲೂಕಿಗೆ ಪ್ರಥಮ ಪಡೆದಿದ್ದಾಳೆ ಎಂದು ತಿಳಿಸಿದರು.

ಸೋಮವಾರಪೇಟೆಯಲ್ಲಿ ಬಸವ ಜಯಂತಿ: ಪ್ರಸಾದ ವಿತರಣೆ



ಕಾಯಕಯೋಗಿ ನ್ಯೂಸ್

ಚಾಮರಾಜನಗರ: ನಗರದ ಸೋಮವಾರಪೇಟೆಯ ಒಂದನೇ ವಾರ್ಡಿನಲ್ಲಿ ಶ್ರೀ ಬಸವ ಯುವ ಬಳಗದಿಂದ ವಿಶ್ವಗುರು ಜಗಜ್ಯೋತಿ ಬಸವೇಶ್ವರರ ಜಯಂತಿಯನ್ನು ಆಚರಣೆ ಮಾಡಲಾಯಿತು.

ಗ್ರಾಮದ ಮುಂಭಾಗದಲ್ಲಿ ಶ್ರೀ ಬಸವೇಶ್ವರರ ಭಾವಚಿತ್ರಪಟ್ಟು ಪೂಜೆ ಸಲ್ಲಿಸುವ ಜೊತೆಗೆ, ಗಣ್ಯರು ಹಾಗೂ ಗ್ರಾಮಸ್ಥರು ವಿಶೇಷ ಪೂಜೆಯಲ್ಲಿ ಭಾಗವಹಿಸಿ ಪುಷ್ಪ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಗಣ್ಯರು, 12ನೇ ಶತಮಾನದಲ್ಲಿಯೇ ಬಸವಣ್ಣ ಅವರು ವೀರಶೈವ ಲಿಂಗಾಯತ ಧರ್ಮವನ್ನು ಸ್ಥಾಪನೆ ಮಾಡಿ, ಜಗತ್ತಿಗೆ ಶಾಂತಿ ಸಹಬಾಳ್ವೆ ಹಾಗೂ ಸಮಾನತೆಯ ನೀತಿ ಪಾಠವನ್ನು ಬೋದಿಸಿದರು. ಬಸವಾದಿ ಶರಣರು ರಚಿಸಿ ಮಾಡಿದ ವಚನಗಳು ಇಂದಿಗೂ ಸಹ ಹೆಚ್ಚು ಪ್ರಸ್ತುತವಾಗಿದೆ. ಅನುಭವ ಮಂಪಟವನ್ನು ಸ್ಥಾಪನೆ ಮಾಡಿ. ಸಮಾಜ ಆಗುಹೋಗುಗಳನ್ನು ಚರ್ಚಿಸಿ, ಪರಿಹಾರ ಕಲ್ಪಿಸುವ ಕಾಯಕದಲ್ಲಿ ನಿರತರಾಗಿದ್ದು, ಕಾಯವೇ ಕೈಲಾಸ ಎಂದು ಸಾರಿದವರು ಬಸವಣ್ಣ ಎಂದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರು ಬಸವ ಯುವ ಬಳಗದ ಸಂತೋಷ್, ಕಾರ್ತಿಕ್, ಮೋಹನ್, ಶರತ್, ಮಲ್ಲೇಶ್ ಹಾಗೂ ಗ್ರಾಮಸ್ಥರು ಇದ್ದರು.

ಸೂರ್ಯ, ಚಂದ್ರ ಇರುವ ತನಕ ಕಲಾ ಪ್ರಚಂಚದಲ್ಲಿ ಡಾ.ರಾಜ್ ವಿಶ್ವಕ್ಕೆ ಮಾದರಿ

ಡಾ.ರಾಜ್‌ಕುಮಾರ್, ಎಸ್.ಜಾನಕಮ್ಮ ಜನ್ಮ ದಿನೋತ್ಸವ, ಪ್ರಶಸ್ತಿ ಪ್ರದಾನ

ಕಾಯಕಯೋಗಿ ನ್ಯೂಸ್

ಚಾಮರಾಜನಗರ: ನಟಸಾರ್ವಭೌಮ ಡಾ. ರಾಜ್‌ಕುಮಾರ್ ಅವರು ಸೂರ್ಯ, ಚಂದ್ರ ಇರುವ ತನಕ ಕಲಾಪ್ರಚಂಚದಲ್ಲಿ ಇಡೀ ವಿಶ್ವಕ್ಕೆ ಮಾದರಿಯಾಗಿದ್ದಾರೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಸುರೇಶ್ ಋಗ್ವೇದಿ ಅಭಿಪ್ರಾಯಪಟ್ಟರು.

ನಗರದ ಕನ್ನಡ ಸಾಹಿತ್ಯ ಪರಿಷತ್ತು ಕಚೇರಿಯಲ್ಲಿ ಡಾ.ಎಸ್.ಪಿ.ಬಾಲಸುಬ್ರಹ್ಮಣ್ಯಂ ಗಾನ ಗಂಧರ್ವ ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದ ಗಾನ ಗಾಂಧರ್ವ ಡಾ.ರಾಜ್ ಕುಮಾರ್ ಹಾಗೂ ಗಾನ ಕೋಗಿಲೆ ಎಸ್. ಜಾನಕಮ್ಮ ಅವರ ಜನ್ಮ ದಿನೋತ್ಸವ ಅಂಗವಾಗಿ ಗೀತಾಗಾಯನ ಹಾಗೂ ರಂಗಭೂಮಿ ಕಲಾವಿದರಿಗೆ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಡಾ. ರಾಜ್‌ಕುಮಾರ್ ಅವರ ಜೀವನ, ಆದರ್ಶ, ನಡೆ, ನುಡಿ ಎಲ್ಲವೂ ಕೂಡ ಪರಿಶುದ್ಧವಾದದ್ದು. ನನಗೆ ಅತ್ಯಂತ ಶ್ರೇಷ್ಠ ವಾದ ಸ್ಥಾನವನ್ನು ನೀಡಿರುವ ಚಾಮರಾಜ ನಗರವೇ ನನಗೆ ಸ್ವರ್ಗದ ಬಾಗಿಲು ಎಂದು ಹೇಳುತ್ತಿದ್ದರು.

ಡಾ.ರಾಜ್‌ಕುಮಾರ್ ಅವರು ಮಹಾ ಪುರುಷರು, ಅವರ ಜೀವನ ಮೌಲ್ಯಗಳು, ಜೀವನ ಸಂದೇಶಗಳು, ಸಾಮಾಜಿಕ ಕಳಕಳಿ, ರಾಜಕೀಯ ಜೀವನ, ಪೌರಾಣಿಕ, ಇತಿಹಾಸ, ಯಾವುದೇ ಕ್ಷೇತ್ರದಲ್ಲೂ ನೋಡಿದರು ಅದರ ಪ್ರತಿರೂಪವಾಗುತ್ತಿದ್ದರು. ಮಯೂರ, ಬಬ್ರುವಾಹನ, ಕೃಷ್ಣ ದೇವರಾಯ, ಕನಕದಾಸರು, ರಾಘವೇಂದ್ರ



ಸ್ವಾಮಿ, ರಾಮಚಂದ್ರ, ಕೃಷ್ಣ ಈ ಪಾತ್ರಗಳಲ್ಲಿ ಪ್ರತಿರೂಪವಾಗಿದ್ದರು. ಅವರು ಭಗವಂತನ ದಿವ್ಯ ಸಂಕಲ್ಪದಲ್ಲಿ ಬಂದಿರುವುದು. ರಾಜ್ ಕುಮಾರ್ ನಮ್ಮ ಜಿಲ್ಲೆಯವರು ಎಂಬುದೇ ನಮ್ಮೆಲ್ಲರ ಪುಣ್ಯ ಹೆಮ್ಮೆ ಎಂದರು.

ಖ್ಯಾತ ಹಿನ್ನಲೆ ಗಾಯಕಿ ಗಾನ ಕೋಗಿಲೆ ಎಸ್.ಜಾನಕಮ್ಮ ಅವರು ತಮ್ಮ ಗಾಯನದ ಮೂಲಕ ಸ್ವರ್ಗದ ಬಾಗಿಲು ತೆರೆಯುವಂತೆ ಮಾಡುತ್ತಿದ್ದರು. ಅವರ ಜನ್ಮದಿನಾಚರಣೆಯನ್ನು ಚಾಮರಾಜ ನಗರದಲ್ಲಿ ಡಾ. ಬಾಲಸುಬ್ರಹ್ಮಣ್ಯಂ ಕಲಾ ವೇದಿಕೆ ಮೊಟ್ಟಮೊದಲು ಆಚರಣೆ ಮಾಡುತ್ತಿರುವುದು ನಿಜಕ್ಕೂ ಅರ್ಥಪೂರ್ಣ ವಾದದ್ದು ಎಂದರು.

ಡಾ.ರಾಜ್‌ಕುಮಾರ್ ಅವರ ಹೆಸರಿನಲ್ಲಿ ಪ್ರಶಸ್ತಿ ಪಡೆಯುವುದು ಪೂರ್ವಜನ್ಮದ ಪುಣ್ಯವಾಗಿದೆ. ಸಂವೃದ್ಧಿ ಸೇವೆಯನ್ನು ಸಲ್ಲಿಸುವ ಮೂಲಕ ಜೀವನವನ್ನು ಸಾರ್ಥಕ ಪಡಿಸಿಕೊಳ್ಳುವ ನಿಟ್ಟಿನಲ್ಲಿ ಜಿಲ್ಲೆಯ ಅನೇಕ ರಂಗಭೂಮಿ ಕಲಾವಿದರು, ನಟರು ಗೌರವಯುತ ಸೇವೆ ಸಲ್ಲಿಸುತ್ತಿದ್ದಾರೆ. ಡಾ. ರಾಜ್‌ಕುಮಾರ್ ಅವರ ಹೆಸರಿನಲ್ಲಿ ಪ್ರಶಸ್ತಿ ಪಡೆಯುವುದು ಪೂರ್ವಜನ್ಮದ ಪುಣ್ಯವಾಗಿದೆ ಎಂದರು.

ಉದ್ಯಮಿ ಎ.ಜಯಸಿಂಹ, ಪರಿಸರ ಪ್ರೇಮಿ ಸಿ.ಎ.ವೆಂಕಟೇಶ್, ಬರಹಗಾರ ಲಕ್ಷ್ಮೀನರಸಿಂಹ, ರೋಟರಿ ಮಾಜಿ ಅಧ್ಯಕ್ಷ ಕೆ.ಎಂ.ಮಹದೇವಸ್ವಾಮಿ ಮಾತನಾಡಿದರು. ವೇದಿಕೆ ಆರ್.ಮೂರ್ತಿ ಅಧ್ಯಕ್ಷತೆ ವಹಿಸಿದ್ದರು.

ಪ್ರಶಸ್ತಿ ಪ್ರದಾನ: ರಂಗಭೂಮಿ ಕಲಾ ವಿದರಾದ ಹರದನಹಳ್ಳಿ ನಟರಾಜು, ನಂಜೇದೇವನಪುರ ಪುರುಷೋತ್ತಮ, ಪಿ.ಮಹದೇವಯ್ಯ, ವೆಂಕಟರಮಣಸ್ವಾಮಿ, ಗೋವಿಂದರಾಜು, ಮಲ್ಲಯ್ಯನಪುರ ಎಂ.ಎನ್.ಮಹದೇವ, ಗೋವಿಂದರಾಜು ಅಮ್ಮನಪುರ, ನಾಗರಾಜು ನಂಜನಗೂಡು ಅವರಿಗೆ ಡಾ.ರಾಜ್‌ಕುಮಾರ್, ಎಸ್. ಜಾನಕಮ್ಮ ಪ್ರಶಸ್ತಿ ಪ್ರದಾನ ಮಾಡ ಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ರಂಗ ಭೂಮಿ ಕಲಾವಿದ ಫಟಂಕಯ್ಯ, ದೊರೆ ಸ್ವಾಮಿ, ವೇದಿಕೆ ಅಧ್ಯಕ್ಷ ಶಿವು ಜೋಸೆಫ್, ಕಾರ್ಯದರ್ಶಿ ರಾಜಣ್ಣ ಮಹೇಶ್ ಕುಮಾರ್ ಬಂಗಾರು ಇತರರು ಹಾಜರಿದ್ದರು.

ಮೇ 12ರಂದು ಬಸವ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭ

ಕಾಯಕಯೋಗಿ ನ್ಯೂಸ್

ಬೆಂಗಳೂರು: ಬೆಂಗಳೂರಿನ ಬಸವ ವೇದಿಕೆಯು ಕರ್ನಾಟಕದ ಒಂದು ಪ್ರತಿಷ್ಠಿತ ಸಂಸ್ಥೆಯಾಗಿದ್ದು, ಬಸವಣ್ಣನವರ ಮತ್ತು ಶರಣರ ತತ್ವ ಸಿದ್ಧಾಂತಗಳನ್ನು ಕಳೆದ 33 ವರ್ಷಗಳಿಂದ ನಿರಂತರವಾಗಿ ರಾಷ್ಟ್ರದಾ ದ್ಯಂತ ಯಶಸ್ವಿಯಾಗಿ ಪ್ರಸಾರ ಮಾಡುತ್ತಾ ಬಂದಿದೆ.

ಪ್ರತಿ ವರ್ಷವು ಬಸವ ವೇದಿಕೆಯು 12ನೇ ಶತಮಾನದ ಕ್ರಾಂತಿ ಪುರುಷರಾದ ಜಗಜ್ಯೋತಿ ಬಸವಣ್ಣನವರ ಜಯಂತಿ ಯನ್ನು ಸುಮಾರು ಮೂರು ದಶಕಗಳಿಂದ ತುಂಬಾ ಅರ್ಥಪೂರ್ಣವಾಗಿ ಆಚರಿಸಿ ಕೊಂಡು ಬಂದಿರುತ್ತದೆ. ಈ ಸಮಾರಂಭ ವನ್ನು ಅರ್ಥಪೂರ್ಣಗೊಳಿಸುವ ದಿಸೆಯಲ್ಲಿ ಬಸವಾದಿ ಶರಣರ ವಿಚಾರ ಧಾರೆಗೆ ಅನುಗುಣವಾಗಿ ವಿಶಿಷ್ಟ ಸಾಮಾ ಜಿಕ ಸೇವೆಯನ್ನು ಸಲ್ಲಿಸಿರುವ ಒಬ್ಬ ಮಹಾನ್ ಸಾಧಕರಿಗೆ "ಬಸವಶ್ರೀ ' ಪ್ರಶಸ್ತಿ ಯನ್ನು ಪ್ರತಿವರ್ಷವೂ ನೀಡಿ ಗೌರವಿಸ ಲಾಗುತ್ತಿದೆ. ಬಸವ ವೇದಿಕೆಯ "ಬಸವಶ್ರೀ" ಪ್ರಶಸ್ತಿಯು ರಾಜ್ಯಮಟ್ಟದ ಅತ್ಯಂತ ಪ್ರತಿಷ್ಠಿತ ಪ್ರಶಸ್ತಿಯಾಗಿದೆ.

ಈ ವರ್ಷದ ಬಸವ ಜಯಂತಿ ಮತ್ತು 'ಬಸವಶ್ರೀ' ಹಾಗೂ 'ವಚನ ಸಾಹಿತ್ಯಶ್ರೀ' ಪ್ರಶಸ್ತಿ ಪ್ರದಾನ ಸಮಾರಂಭ ಮೇ 12ರಂದುಸಂಜೆ 5:30ಕ್ಕೆ ಬೆಂಗಳೂರಿನ ಗಾಂಧೀಭವನದಲ್ಲಿ ಏರ್ಪಡಿಸಲಾಗಿದೆ. ಈ ಸಮಾರಂಭದ ದಿವ್ಯ ಸಾನಿಧ್ಯವನ್ನು ಆದಿ ಚುಂಚನಗಿರಿಯ ಮಠದ ಪೀಠಾಧ್ಯಕ್ಷ ಡಾ ಶ್ರೀ ನಿರ್ಮಲಾನಂದನಾಥ ಮಹಾಸ್ವಾಮಿ ವಹಿಸಿಕೊಂಡು ಆಶೀರ್ವಚನ ನೀಡಲಿ ದ್ದಾರೆ. ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಸಮಾರಂಭ ಉದ್ಘಾ ಟಿಸಿ ಪ್ರತಿಷ್ಠಿತ ಬಸವಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ. ಪ್ರಖ್ಯಾತ ಬಾಹ್ಯಾ ಕಾಶ ವಿಜ್ಞಾನಿಗಳು ಹಾಗೂ ಇಸ್ರೋ ಮಾಜಿ ಅಧ್ಯಕ್ಷ ಪದ್ಮಶ್ರೀ ಡಾ.ಎ.ಎಸ್. ಕಿರಣ್‌ಕುಮಾರ್ ಮುಖ್ಯ ಅತಿಥಿಗಳಾಗಿ ಆಗಮಿಸಿ ವಚನ ಸಾಹಿತ್ಯಶ್ರೀ ಪ್ರಶಸ್ತಿಯನ್ನು ಪ್ರದಾನ ಮಾಡಿ, ಬಸವ ಜ್ಯೋತಿ ಮಾಹಿತಿ ಕೈಪಿಡಿಯನ್ನು ಬಿಡುಗಡೆ ಮಾಡಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯ ಮೂರ್ತಿ ರತ್ನಕಲಾರವರು ವಹಿಸಲಿದ್ದಾರೆ. ಬಸವ ವೇದಿಕೆ ಅಧ್ಯಕ್ಷ ಡಾ.ಸಿ.ಸೋಮ ಶೇಖರ ಪ್ರಾಸ್ತಾವಿಕ ಭಾಷಣ ಮಾಡಲಿ ದ್ದಾರೆ. ಅಂದು ಸಂಜೆ 5 ಗಂಟೆಗೆ ಪ್ರಖ್ಯಾತ ಹಿಂದೂಸ್ತಾನಿ ಗಾಯಕರಾದ ಸನ್ಮಾನ್ಯ ಪಂಡಿತ್ ಅಂಬಯ್ಯ ನುಲಿಯವರಿಂದ ವಚನ ಗಾಯನ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಇದುವರೆಗೂ ಬಸವ ವೇದಿಕೆಯು 26 ಹಿರಿಯ ಮಹಾನ್ ಸಾಧಕರುಗಳಿಗೆ ಬಸವಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಿರು ತ್ತದೆ. ಈ ವರ್ಷದ ಪ್ರತಿಷ್ಠಿತ ಬಸವಶ್ರೀ ಪ್ರಶಸ್ತಿಯನ್ನು ಸಾರ್ವಜನಿಕ ಕ್ಷೇತ್ರದಲ್ಲಿ ಸಲ್ಲಿಸಿರುವ ಅನುಪಮ ಸೇವೆ, ಶರಣ ಸಾಹಿತ್ಯಕ್ಕೆ ಸಲ್ಲಿಸಿರುವ ಮೌಲಿಕ ಕೊಡುಗೆ ಗುರುತಿಸಿ ಡಾ.ಲೀಲಾದೇವಿ ಆರ್. ಪ್ರಸಾದ್ ಅವರಿಗೆ ಹಾಗೂ ವಚನ ಸಾಹಿತ್ಯಶ್ರೀ ಪ್ರಶಸ್ತಿಯನ್ನು ಪ್ರಖ್ಯಾತ ಹಿಂದೂಸ್ತಾನಿ ಗಾಯಕರಾದ ಪಂಡಿತ್ ಅಂಬಯ್ಯ ನುಲಿ

ಬಸವ ಜಯಂತಿ, ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಸರಳ ಆಚರಣೆ



ಕಾಯಕಯೋಗಿ ನ್ಯೂಸ್

ಬೆಂಗಳೂರು ಗ್ರಾಮಾಂತರ ಜಿಲ್ಲೆ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿ ಯಿಂದ ಕಾಯಕ ಯೋಗಿ, ಜಗಜ್ಯೋತಿ, ಸಾಂಸ್ಕೃತಿಕ ನಾಯಕ ಬಸವಣ್ಣನವರ